ಸಂಪುಟ : 11 ಸಂಚಿಕೆ: 51 ಪುಟ : 4+2 ಬೆಲೆ: 3.00 ಗುರುವಾರ ಮಾರ್ಚ್ 26 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 51 Pages : 4+2 Price : 3.00 Thursday March 26 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕೆಂಪು ಮೆಣಸಿನಕಾಯಿ ಬೆಳೆ ವಿಮೆ ಪರಿಹಾರಕ್ಕೆ ರೈತರ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಮುಂಗಾರು ಹಂಗಾಮಿನಲ್ಲಿ ವಿಮೆ ಪಾವತಿಸಿದ ರೈತರಿಗೆ ಮಧ್ಯಂತರ ಪರಿಹಾರ ನೀಡುವಂತೆ ಗದಗ ಜಿಲ್ಲೆಯ ರೈತರು ಆಗ್ರಹಿಸಿದ್ದಾರೆ.

ಈ ವರ್ಷ ಜಿಲ್ಲೆಯಲ್ಲಿ ಅಧಿಕ ಮಳೆಯ ಪರಿಣಾಮವಾಗಿ ಹೆಸರು, ಮೆಕ್ಕೆಜೋಳ, ಶೇಂಗಾ, ಈರುಳ್ಳಿ ಹಾಗೂ ಕೆಂಪು ಮೆಣಸಿನಕಾಯಿ ಸೇರಿದಂತೆ ಹಲವು ಬೆಳೆಗಳು ಹಾನಿಗೊಳಗಾಗಿವೆ. ರೈತರು ಈ ಬೆಳೆಗಳಿಗೆ ವಿಮೆ ತುಂಬಿ, ಓರಿಯಂಟಲ್ ಇನ್ಸುರೆನ್ಸ್ ಕಂಪನಿಗೆ ಟೋಲ್ ಫ್ರೀ ಮೂಲಕ ದೂರುಗಳನ್ನು ದಾಖಲಿಸಿದ್ದರು.

ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ಇನ್ಸುರೆನ್ಸ್ ಕಂಪನಿಯವರು ಜಂಟಿಯಾಗಿ ನಡೆಸಿದ ಮಾದರಿ ಸಮೀಕ್ಷೆಯ ನಂತರ ಹೆಸರು, ಮೆಕ್ಕೆಜೋಳ, ಶೇಂಗಾ, ಸೂರ್ಯಕಾಂತಿ, ಹತ್ತಿ ಬೆಳೆಗಳಿಗೆ ಮಧ್ಯಂತರ ಪರಿಹಾರ ನೀಡಲಾಗಿದೆ. ಆದರೆ ಕೆಂಪು ಮೆಣಸಿನಕಾಯಿ ಬೆಳೆದ ರೈತರಿಗೆ ಯಾವುದೇ ಪರಿಹಾರ ಸಿಗದಿರುವುದು ಅಸಮಾಧಾನಕ್ಕೆ ಕಾರಣವಾಗಿದೆ ಎಂದು ರೈತರು ಆರೋಪಿಸಿದ್ದಾರೆ. ಪೂರ್ವ ಮುಂಗಾರಿನಲ್ಲಿ ಮಳೆಯ ಏರುಪೇರುಗಳಿಂದಾಗಿ ಅನೇಕ ರೈತರು ಪುನಃ ಬಿತ್ತನೆ ಮಾಡಬೇಕಾದ ಪರಿಸ್ಥಿತಿ ಉಂಟಾಯಿತು. ಈ ವೇಳೆ ಬೆಳೆ ಸಮೀಕ್ಷೆ ಹಾಗೂ ಜಿಪಿಎಸ್ ದಾಖಲಾತಿಗಳಲ್ಲಿ ದೋಷಗಳು ಉಂಟಾಗಿ ನಿಜವಾದ ರೈತರಿಗೆ ಅನ್ಯಾಯವಾಗಿದೆ ಎಂದು ಅವರು ತಿಳಿಸಿದ್ದಾರೆ.

ಆದ್ದರಿಂದ ಕೆಂಪು ಮೆಣಸಿನಕಾಯಿ ಬೆಳೆ ವಿಮೆ ತುಂಬಿ ನಷ್ಟ ಅನುಭವಿಸಿದ ರೈತರಿಗೆ ತಕ್ಷಣ ಮಧ್ಯಂತರ ಪರಿಹಾರ ನೀಡಲು ಜಿಲ್ಲಾಧಿಕಾರಿಗಳು, ತೋಟಗಾರಿಕಾ ಇಲಾಖೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಮುಂದಾಗಬೇಕು ಎಂದು ರೈತರು ಒತ್ತಾಯಿಸಿದ್ದಾರೆ. ಇಲ್ಲವಾದಲ್ಲಿ ಜಿಲ್ಲಾ ಕಚೇರಿ ಮುಂದೆ ಹೋರಾಟ ನಡೆಸುವುದಾಗಿ ರೈತ ಸಂಘಟನೆಗಳು ಎಚ್ಚರಿಕೆ ನೀಡಿವೆ.

## ಮಾ.27, 31ರಂದು ಕಸಾಯಿಖಾನೆ, ಮಾಂಸ ಮಾರಾಟ ಬಂದ್

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆ ವ್ಯಾಪ್ತಿಯ ಕಸಾಯಿಖಾನೆಗಳು ಹಾಗೂ ಮಾಂಸ ಮಾರಾಟಗಾರರಿಗೆ ಪ್ರಮುಖ ಸೂಚನೆ ನೀಡಲಾಗಿದೆ. ಶ್ರೀ ರಾಮನವಮಿ ಹಾಗೂ ಮಹಾವೀರ ಜಯಂತಿ ಅಂಗವಾಗಿ ಕ್ರಮವಾಗಿ ಮಾರ್ಚ್ 27 ಮತ್ತು ಮಾರ್ಚ್ 31ರಂದು ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಈ ದಿನಗಳಲ್ಲಿ ಯಾವುದೇ ರೀತಿಯ ಮಾಂಸ ಮಾರಾಟ ನಡೆಸಬಾರದು ಹಾಗೂ ಜಾನುವಾರುಗಳನ್ನು ವಧೆ ಮಾಡದಂತೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ. ಆದೇಶವನ್ನು ಉಲ್ಲಂಘಿಸಿದಲ್ಲಿ ಸಂಬಂಧಪಟ್ಟವರ ಲೈಸೆನ್ಸ್ ರದ್ದುಪಡಿಸಲಾಗುವುದು ಎಂದು ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಳಸಾರೋಹಣದಿಂದ ಮಂಗಲೋತ್ಸವದವರೆಗೆ ವೈವಿಧ್ಯಮಯ ಧಾರ್ಮಿಕ–ಸಾಂಸ್ಕೃತಿಕ ಕಾರ್ಯಕ್ರಮಗಳು

# ಏ. 1ರಿಂದ ತೋಂಟದಾರ್ಯ ಜಾತ್ರಾ ಮಹೋತ್ಸವ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

2026ನೇ ಸಾಲಿನ ಶ್ರೀ ಜಗದ್ಗುರು ತೋಂಟ–ದಾರ್ಯ ಜಾತ್ರಾ ಮಹೋತ್ಸವವು ಎಪ್ರಿಲ್ 1ರಿಂದ ಆರಂಭವಾಗಲಿದ್ದು, ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ವಿಜೃಂಭಣೆಯಿಂದ ನಡೆಯಲಿದೆ ಎಂದು ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ವಿನಾಯಕ ಮಾನ್ವಿ ತಿಳಿಸಿದ್ದಾರೆ.

ತೋಂಟದಾರ್ಯ ಮಠದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತ್ರೆ ಅಂಗವಾಗಿ ಬಸವ ಮಹಾಂತ ಶ್ರೀಗಳಿಂದ ಪ್ರತಿದಿನ ಸಂಜೆ ಬಸವಾದಿ ಶರಣರ ವಚನ ದರ್ಶನ ಪ್ರವಚನ ನಡೆಯುತ್ತಿದ್ದು, ಷಟಸ್ಥಲ ಧ್ವಜಾರೋಹಣ ಈಗಾಗಲೇ ನೆರವೇರಿದೆ. ಮಾರ್ಚ್ 29ರಂದು ಕಳಸಾರೋಹಣ ನಡೆಯಲಿದೆ ಎಂದರು.

ಎಪ್ರಿಲ್ 1ರಂದು ಸಂಜೆ 6.30ಕ್ಕೆ ಜಾತ್ರೆಯ ಪ್ರಾರಂಭೋತ್ಸವ ನಡೆಯಲಿದ್ದು, ಡಾ. ಮಲ್ಲಿಕಾರ್ಜುನ ಮುರುಘರಾಜೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ಸಚಿವ ಎಂ.ಬಿ. ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದು, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಗ್ರಂಥ ಬಿಡುಗಡೆ ಮಾಡಲಿದ್ದಾರೆ. ವಿವಿಧ ಮಠಗಳ ಸ್ವಾಮೀಜಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.



ಎಪ್ರಿಲ್ 2ರಂದು ತೋಂಟದ ಸಿದ್ಧರಾಮ ಸ್ವಾಮೀಜಿಗಳ ಪಾದಯಾತ್ರೆ ನಡೆಯಲಿದ್ದು, ಸಂಜೆ ಚಿತ್ತಾ ನಕ್ಷತ್ರದಲ್ಲಿ ಮಹಾರಥೋತ್ಸವ ಜರುಗಲಿದೆ. ಇದೇ ದಿನ ಐಎಎಸ್‌ನಲ್ಲಿ ರಾಜ್ಯಕ್ಕೆ ಪ್ರಥಮ ರ್‍ಯಾಂಕ್ ಪಡೆದ ಕಿರಣ ಕಮತೆ ಹಾಗೂ ಇಕ್ವೇಟರ್ ಪ್ರಶಸ್ತಿ ಪುರಸ್ಕೃತ ಮಹಿಳಾ ಸಂಘದ ಅಧ್ಯಕ್ಷರಿಗೆ ಸನ್ಮಾನ ನಡೆಯಲಿದೆ. ವಚನ ನೃತ್ಯ ಮತ್ತು ಸಂಗೀತ ಕಾರ್ಯಕ್ರಮಗಳು ಜನರ ಗಮನ ಸೆಳೆಯಲಿವೆ.

ಜಾತ್ರೆಯ ಅಂಗವಾಗಿ ಕಬಡ್ಡಿ ಪಂದ್ಯಾವಳಿ, ವ್ಯಸನಮುಕ್ತ ಜಾಗೃತಿ ಪಾದಯಾತ್ರೆ, ಉಚಿತ ವೈದ್ಯಕೀಯ ಶಿಬಿರ, ಮಹಿಳೆಯರಿಂದ ವಚನ ಸಾಹಿತ್ಯ ಪರಿಚಯ, ವೇಷಭೂಷಣ ಸ್ಪರ್ಧೆ ಹಾಗೂ ಸಿರಿಧಾನ್ಯ ಅಡುಗೆ ಸ್ಪರ್ಧೆಗಳು ನಡೆಯಲಿವೆ ಎಂದು ತಿಳಿಸಿದರು.

ಎಪ್ರಿಲ್ 3ರಂದು ಮೆರವಣಿಗೆ ಮತ್ತು ಲಘು ರಥೋತ್ಸವ ನಡೆಯಲಿದ್ದು, ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಸನ್ಮಾನ ನಡೆಯಲಿದೆ. ಸಚಿವ ಎಚ್.ಕೆ. ಪಾಟೀಲ, ಸಂಸದ ಬಸವರಾಜ ಬೊಮ್ಮಾಯಿ ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ.

ಎಪ್ರಿಲ್ 4ರಂದು ಮಂಗಲೋತ್ಸವ ನಡೆಯಲಿದ್ದು, ಯುವ ಸಂಸತ್ ಮಹೋತ್ಸವದಲ್ಲಿ ಸಾಧನೆ ಮಾಡಿದ ಮಾನ್ಯಾ ಶೆಟ್ಟಿ ಅವರಿಗೆ ಸನ್ಮಾನ, ವಚನ ಗ್ರಂಥ ಬಿಡುಗಡೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಸುದ್ದಿಗೋಷ್ಠಿಯಲ್ಲಿ ಜಾತ್ರಾ ಸಮಿತಿಯ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

### ಸ್ಥಳೀಯ ವ್ಯಾಪಾರಸ್ಥರಿಗೆ ಅವಕಾಶ ಕಲ್ಪಿಸುವಂತೆ ಮನವಿ

# ಜಾತ್ರಾ ಮಹೋತ್ಸವ 7 ದಿನಕ್ಕೆ ಸೀಮಿತಗೊಳಿಸಲು ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಜಗದ್ಗುರು ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವವನ್ನು ಕೇವಲ 7 ದಿನಗಳಿಗೆ ಸೀಮಿತಗೊಳಿಸಿ ಸ್ಥಳೀಯ ವ್ಯಾಪಾರಸ್ಥರಿಗೆ ವ್ಯಾಪಾರ ಮಾಡಲು ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿ ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆಯ ವತಿಯಿಂದ ಜಾತ್ರಾ ಮಹೋತ್ಸವದ ಅಧ್ಯಕ್ಷರಾದ ವಿನಾಯಕ ಮಾನ್ವಿ ಅವರಿಗೆ ಮನವಿ ಸಲ್ಲಿಸಲಾಯಿತು.

ಇದೇ ಎಪ್ರಿಲ್ 1ರಿಂದ 4ರವರೆಗೆ ಜರುಗಲಿರುವ ಜಾತ್ರಾ ಮಹೋತ್ಸವದ ಅಧಿಕೃತ ಆಹ್ವಾನ ಪತ್ರಿಕೆಯಲ್ಲಿ ಕೇವಲ ನಾಲ್ಕು ದಿನಗಳ ಕಾರ್ಯಕ್ರಮ ಉಲ್ಲೇಖವಾಗಿದ್ದರೂ, ಜಾತ್ರೆ ತಿಂಗಳಾನುಗಟ್ಟಲೆ ನಡೆಯುತ್ತಿರುವುದು ಸರಿಯಲ್ಲ ಎಂದು ವೇದಿಕೆಯವರು ಮನವಿಯಲ್ಲಿ ತಿಳಿಸಿದ್ದಾರೆ.

ತಿಂಗಳಾನುಗಟ್ಟಲೆ ಜಾತ್ರೆ ನಡೆಯುವುದರಿಂದ ಸ್ಥಳೀಯ ವ್ಯಾಪಾರಸ್ಥರು ಬಂಡವಾಳ ಹೂಡಿ, ಕಾರ್ಮಿಕರನ್ನು ನೇಮಿಸಿಕೊಂಡು ಹಾಗೂ ಹೆಚ್ಚಿನ ಬಾಡಿಗೆ ನೀಡಿ ವ್ಯಾಪಾರ ನಡೆಸಿದರೂ ವ್ಯವಹಾರ ಸಿಗದೆ ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಜಿಲ್ಲೆಯಲ್ಲಿ ಕೈಗಾರಿಕೆಗಳ ಕೊರತೆಯಿಂದ ಯುವಕರು ನಿರುದ್ಯೋಗ ಸಮಸ್ಯೆ ಎದುರಿಸುತ್ತಿದ್ದು, ಇದರಿಂದ ಮಾನಸಿಕ ಒತ್ತಡಕ್ಕೂ ಒಳಗಾಗುತ್ತಿದ್ದಾರೆ ಎಂದು ಅವರು ತಿಳಿಸಿದ್ದಾರೆ.



ಈ ಹಿನ್ನೆಲೆಯಲ್ಲಿ ಜಾತ್ರಾ ಮಹೋತ್ಸವವನ್ನು 7 ದಿನಗಳಿಗೆ ಸೀಮಿತಗೊಳಿಸಿ ಸ್ಥಳೀಯ ವ್ಯಾಪಾರಸ್ಥರಿಗೆ ವ್ಯಾಪಾರಕ್ಕೆ ಆದ್ಯತೆ ನೀಡಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಹೋರಾಟ ಅನಿವಾರ್ಯವಾಗುತ್ತದೆ ಎಂದು ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆಯ ಸತೀಶ ಕುಂಬಾರ ನೇತೃತ್ವದಲ್ಲಿ ಎಚ್ಚರಿಕೆ ನೀಡಿದರು.

ರಥ ಬೀದಿ ಸಾರ್ವಜನಿಕ ಮಾರ್ಗವಾಗಿರುವುದರಿಂದ ಜಾತ್ರೆ ದೀರ್ಘಕಾಲ ನಡೆಯುವುದರಿಂದ ವಾಹನ ಸಂಚಾರಕ್ಕೂ ಅಡಚಣೆ ಉಂಟಾಗುತ್ತಿದೆ. ರಥೋತ್ಸವ ಮಾರ್ಗದಲ್ಲಿರುವ ಶ್ರೀಮಠ ವಾಣಿಜ್ಯ ಸಂಕೀರ್ಣಗಳಲ್ಲಿನ ವ್ಯಾಪಾರಸ್ಥರು ಸಹ ಆರ್ಥಿಕವಾಗಿ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಈ ಸಂದರ್ಭದಲ್ಲಿ ಮಹೇಶ ರೋಖಡೆ, ರಾಜು ಗದ್ದಿ, ಪಿ.ಎಸ್. ಕಾಳೆ, ರಾಜು ದಮಾಮ, ಕುಮಾರ ನಡಗೇರಿ, ಶರಣೇಶ ಇಟಗಿ, ವೆಂಕಟೇಶ ದೊಡ್ಡಮನಿ, ಅಶೋಕ ಭಜಂತ್ರ, ಸಂಜೀವ ವಾಲ್ಮೀಕಿ, ರವಿ ಜಾಲಗಾರ, ರಾಮು ಗೌಡರ, ಸದಾನಂದ ಸಿಂಗ್ ಗುರ್ಲಹೋಸೂರ ಮುಂತಾದವರು ಉಪಸ್ಥಿತರಿದ್ದರು.

### ವಿದ್ಯಾರ್ಥಿಗಳಿಂದ ಮಾನವೀಯ ಕಾರ್ಯ

# ‘ಪಕ್ಷಿಗಳನ್ನು ರಕ್ಷಿಸಿ’ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗದಗ

ಬೇಸಿಗೆ ತಾಪಮಾನ ತೀವ್ರಗೊಳ್ಳುತ್ತಿರುವ ಸಂದರ್ಭದಲ್ಲಿ ಪಕ್ಷಿಗಳ ರಕ್ಷಣೆಗೆ ಮಾನವೀಯ ಹೆಜ್ಜೆಯಾಗಿ ನಗರದ ಪ್ರತಿಷ್ಠಿತ ಕೆ.ಎಲ್.ಇ. ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಎನ್.ಎಸ್.ಎಸ್. ಘಟಕವು ‘ಪಕ್ಷಿಗಳನ್ನು ರಕ್ಷಿಸಿ’ ಎಂಬ ವಿಶೇಷ ಚಟುವಟಿಕೆಯನ್ನು ಆಯೋಜಿಸಿದೆ.

ಈ ಅಭಿಯಾನದ ಅಂಗವಾಗಿ, ಎನ್.ಎಸ್.ಎಸ್. ಸ್ವಯಂಸೇವಕರು ನಗರದಲ್ಲಿನ ವಿವಿಧ ಪ್ರದೇಶಗಳಲ್ಲಿ ಪಕ್ಷಿಗಳಿಗೆ ಅಗತ್ಯವಾದ ಕಾಳು ಹಾಗೂ ನೀರಿನ ವ್ಯವಸ್ಥೆ ಮಾಡಿ, ಅವುಗಳ ನಿರಂತರ ಪೂರೈಕೆಗೆ ಕ್ರಮ ಕೈಗೊಂಡಿದ್ದಾರೆ. ಬಿಸಿಲಿನ




ತಾಪಮಾನದಿಂದ ತೊಂದರೆ ಅನುಭವಿಸುವ ಪಕ್ಷಿಗಳಿಗೆ ಈ ಕ್ರಮ ಜೀವದಾನವಾಗಲಿದೆ ಎಂದು ಕಾಲೇಜು ವಲಯದಲ್ಲಿ ಅಭಿಪ್ರಾಯ ವ್ಯಕ್ತವಾಗಿದೆ.

ಸ್ವಯಂಸೇವಕರಿಗೆ ಪ್ರತಿದಿನ ಈ ವ್ಯವಸ್ಥೆಯನ್ನು ಪರಿಶೀಲಿಸುವಂತೆ ಸೂಚನೆ ನೀಡಲಾಗಿದ್ದು, ಪರಿಸರ ಸಂರಕ್ಷಣೆಯ ಜೊತೆಗೆ ಜೀವಜಗತ್ತಿನ ಮೇಲಿನ ಕಾಳಜಿಯನ್ನು ಬೆಳೆಸುವ ಉದ್ದೇಶ ಈ ಕಾರ್ಯದ ಹಿಂದೆ ಇದೆ.

ಈ ಕಾರ್ಯಕ್ರಮದಲ್ಲಿ ಎನ್.ಎಸ್.ಎಸ್. ಘಟಕದ ಕಾರ್ಯಕ್ರಮಾಧಿಕಾರಿಗಳಾದ ಪ್ರೊ. ವಾಗೀಶ ಗು. ರೇಶ್ಮಿ, ಸಹ ಕಾರ್ಯಕ್ರಮಾಧಿಕಾರಿಗಳಾದ ಪ್ರೊ. ವೀರಣ್ಣ ಬಡಿಗೇರ್, ಘಟಕದ ನಾಯಕಿ ಕುಮಾರಿ ನೀಲಮ್ಮ ಸೀತಾರಳ್ಳಿ, ತಂಡ 10ರ ನಾಯಕ ಸೋಮಶೇಖರ ಕುರಿ ಸೇರಿದಂತೆ ಎನ್.ಎಸ್.ಎಸ್. ಸ್ವಯಂಸೇವಕರು ಮತ್ತು ವಿವಿಧ ತಂಡಗಳ ನಾಯಕ, ನಾಯಕಿಯರು ಉಪಸ್ಥಿತರಿದ್ದರು.

### ವಿಶ್ವ ಗ್ರಾಹಕರ ದಿನಾಚರಣೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ. ಆರ್.

# “ಸುರಕ್ಷಿತ ಉತ್ಪನ್ನಗಳು, ಆತ್ಮವಿಶ್ವಾಸದ ಗ್ರಾಹಕರು”

■ವಿಜಯಸಾಕ್ಷಿ ಸುದ್ದಿ, ಗದಗ

ಯುವಜನರಲ್ಲಿ ಗ್ರಾಹಕ ಹಕ್ಕುಗಳ ಬಗ್ಗೆ ಅರಿವು ಮೂಡಿಸುವುದು ಅತ್ಯಂತ ಅಗತ್ಯವಾಗಿದೆ. ಸುರಕ್ಷಿತ ಉತ್ಪನ್ನಗಳನ್ನು ಖರೀದಿಸಿದಾಗ ಮಾತ್ರ ಆತ್ಮವಿಶ್ವಾಸದ ಗ್ರಾಹಕರಾಗಲು ಸಾಧ್ಯ ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ. ಆರ್. ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ನಾಗಾವಿಯ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದಲ್ಲಿ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಜಿಲ್ಲೆಯಲ್ಲಿ ಗ್ರಾಹಕರ ಹಿತರಕ್ಷಣೆಗಾಗಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಆಹಾರ ಸುರಕ್ಷತಾ ಅಧಿಕಾರಿಗಳು ಹಾಗೂ ತೂಕ–ಮಾಪನ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಸಾರ್ವಜನಿಕರು ಇವರ ಸೇವೆಯನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

> “ಸುರಕ್ಷಿತ ಉತ್ಪನ್ನಗಳನ್ನು ಖರೀದಿಸಿದಾಗ ಮಾತ್ರ ಗ್ರಾಹಕರು ಆತ್ಮವಿಶ್ವಾಸದಿಂದಿರಲು ಸಾಧ್ಯ”
> – ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ. ಆರ್.

▸▸3ನೇ ಪುಟಕ್ಕೆ

### ಗ್ರಾಮಾಭಿವೃದ್ಧಿಗೆ ಧರ್ಮಸ್ಥಳ ಯೋಜನೆಯ ಮಹತ್ವ


# ವಾತ್ಸಲ್ಯ ಯೋಜನೆಯಡಿ ಮನೆ ಹಸ್ತಾಂತರ!

■ವಿಜಯಸಾಕ್ಷಿ ಸುದ್ದಿ, ಗದಗ

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯಗಳು ಅತ್ಯಂತ ಪರಿಣಾಮಕಾರಿಯಾಗಿದ್ದು, ಗ್ರಾಮೀಣಾಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಜಿಲ್ಲಾ ನಿರ್ದೇಶಕ ಕೇಶವ ದೇವಾಂಗ ಹೇಳಿದರು.

ಸಮೀಪದ ಕಳಕಾಪೂರ ಗ್ರಾಮದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಾತ್ಸಲ್ಯ ಯೋಜನೆಯಡಿ ಫಲಾನುಭವಿ ಶಾಹಿದಾ ಬಾನು ಅವರಿಗೆ ಮನೆ ಹಸ್ತಾಂತರಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಅತ್ಯಂತ ಕಷ್ಟದಿಂದ ಬದುಕು ನಡೆಸುತ್ತಿರುವವರಿಗೆ ಶ್ರೀ ಕ್ಷೇತ್ರ



ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ನೆರವಾಗುತ್ತಿದ್ದು, ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡುತ್ತಿದೆ. ವಿಶೇಷವಾಗಿ ವಾತ್ಸಲ್ಯ ಯೋಜನೆಯಡಿ ಮನೆ ನಿರ್ಮಿಸಿ ನೀಡುವ ಕಾರ್ಯವು ಡಾ. ವೀರೇಂದ್ರ ಹೆಗ್ಗಡೆ ಹಾಗೂ ಡಾ. ಹೇಮಾವತಿ ಅಮ್ಮನವರ ಸಾಮಾಜಿಕ ಕಾಳಜಿಗೆ ಸಾಕ್ಷಿಯಾಗಿದೆ ಎಂದರು.

ಈ ಯೋಜನೆಯಡಿ ಇದುವರೆಗೆ 700ಕ್ಕೂ ಹೆಚ್ಚು ಮನೆಗಳನ್ನು ನಿರ್ಮಿಸಲಾಗಿದೆ. ಜೊತೆಗೆ 24,800 ವಾತ್ಸಲ್ಯ ಕಿಟ್‌ಗಳನ್ನು ವಿತರಿಸಲಾಗಿದ್ದು, 80,392 ಅಶಕ್ತರಿಗೆ ಮಾಸಾಶನ ನೀಡಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಕೆರೆಗಳ ಪುನಶ್ಚೇತನ, ದೇವಸ್ಥಾನಗಳ ಅಭಿವೃದ್ಧಿ ಹಾಗೂ ಕೃಷಿ ಉತ್ತೇಜನಕ್ಕೂ ಯೋಜನೆ ಪ್ರೇರಣೆ ನೀಡುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಜನಜಾಗೃತಿ ಸದಸ್ಯ ಜಗದೀಶ ಕರಡಿ, ತಾಲೂಕ ಯೋಜನಾಧಿಕಾರಿ ಮಹಾಬಲೇಶ ಪಟಗಾರ, ಕಳಕಪ್ಪ ರಾಜೂರ, ಅಲ್ಲಾಸಾಬ ಹೂಲಗೇರಿ, ನಜೀಮ ಮನ್ನಾಪೂರ, ಸುರೇಶ ವಡ್ಡರ, ಲಕ್ಷ್ಮೀ ಮಠದ, ಕವಿತಾ ಟಿ, ಗೀತಾ ಗಡಾದ ಸೇರಿದಂತೆ ಇತರರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಶರಣಪ್ಪ ಅರಮನಿ ನಿರ್ವಹಿಸಿದರು.

# ಭಾಗ್ಯಶ್ರೀ ಹಳ್ಳಿಕೇರಿಮಠರಿಗೆ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೆಂಗಳೂರಿನ ರವೀಂದ್ರ ಕಲಾ ಭವನದಲ್ಲಿ ಹಮ್ಮಿಕೊಂಡ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಮಾರಂಭದಲ್ಲಿ, ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಜಂತಲಿ–ಶಿರೂರು ಗ್ರಾಮದ ಶ್ರೀಮತಿ ಭಾಗ್ಯಶ್ರೀ ಗವಿಶಿದ್ಧಯ್ಯ ಹಳ್ಳಿಕೇರಿಮಠ ಅವರಿಗೆ 2026ನೇ ಸಾಲಿನ




ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಭಾಗ್ಯಶ್ರೀ ತಮ್ಮ ಜೀವನವನ್ನು ಕೃಷಿ ಕ್ಷೇತ್ರ ಹಾಗೂ ನಾಡು–ನುಡಿ ಸೇವೆಗೆ ಮೀಸಲಾಗಿಸಿಕೊಂಡು, ಸಮುದಾಯದಲ್ಲಿ ಸ್ತ್ರೀಶಕ್ತಿಯ ಪ್ರೇರಣೆಯಾಗಿ ಪರಿಣಮಿಸಿದ್ದಾರೆ.

ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕರ್ನಾಟಕ ಸರಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವೆ ಶ್ರೀಮತಿ ಲಕ್ಷ್ಮಿ ಆರ್. ಹೆಬ್ಬಾಳ್ಕರ್, ಇಲಾಖೆಯ ಕಾರ್ಯದರ್ಶಿ ಡಾ. ಶಮ್ಲಾ ಇಕ್ಬಾಲ್, ನಿರ್ದೇಶಕರು ಶ್ರೀ ಮಹೇಶ್ ಬಾಬು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಎ. 28ಕ್ಕೆ ಎಸ್.ಎಸ್.ಕೆ. ಸಮಾಜದಿಂದ ಸಾಮೂಹಿಕ ವಿವಾಹ, ಉಪನಯನ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ



ಇಲ್ಲಿನ ಎಸ್.ಎಸ್.ಕೆ. ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ ಹಾಗೂ ಜಗದಂಬಾ ಮಹಿಳಾ ಮಂಡಳದ ಸಂಯುಕ್ತಾಶ್ರಯದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ವೈಶಾಖ ಶುದ್ಧ ದ್ವಾದಶಿ ಅಂಗವಾಗಿ ಅಂಬಾಭವಾನಿ ದೇವಿಯ 111ನೇ ಪ್ರಾಣ ಪ್ರತಿಷ್ಠಾಪನಾ ದಿನದ ನಿಮಿತ್ತ ಎಸ್.ಎಸ್.ಕೆ. ಸಮಾಜದ ವತಿಯಿಂದ ಸಾಮೂಹಿಕ ವಿವಾಹ ಹಾಗೂ ಉಪನಯನ ಕಾರ್ಯಕ್ರಮವನ್ನು ಎಪ್ರಿಲ್ 28ರಂದು ಬೆಟಗೇರಿಯ ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದ ಅಂಗವಾಗಿ ಎಪ್ರಿಲ್ 26ರಿಂದ 28ರವರೆಗೆ ದೇವಿಯ ವಿಶೇಷ ಅಲಂಕಾರ, ಪೂಜಾ ಕಾರ್ಯಕ್ರಮ, ಭಜನಾ ಕಾರ್ಯಕ್ರಮ ಹಾಗೂ ಪ್ರಸಾದ ವಿತರಣೆ ನಡೆಯಲಿದೆ. ಎಪ್ರಿಲ್ 28ರಂದು ಸಾಮೂಹಿಕ ವಿವಾಹ ಹಾಗೂ ಉಪನಯನ ಕಾರ್ಯಕ್ರಮಗಳು ನೆರವೇರಲಿವೆ.

ಸಾಮೂಹಿಕ ವಿವಾಹ ಹಾಗೂ ಉಪನಯನ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರು ಮಾರ್ಚ್ 26ರಿಂದ ಎಪ್ರಿಲ್ 25ರವರೆಗೆ ನೊಂದಣಿ ಮಾಡಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ 9448309622, 9448629772, 9880338064, 9448211933 ಸಂಖ್ಯೆಗಳ ಮೂಲಕ ಸಂಪರ್ಕಿಸಬಹುದು.

# ತಾಲೂಕಿನಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಯಶಸ್ವಿ ಅನುಷ್ಠಾನ: ಅರವಿಂದ ಏಗನಗೌಡರ




■ವಿಜಯಸಾಕ್ಷಿ ಸುದ್ದಿ, ಧಾರವಾಡ

ತಾಲೂಕಿನಲ್ಲಿ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಗಮನಾರ್ಹ ಪ್ರಗತಿ ನಡೆದಿದೆ ಎಂದು ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಅರವಿಂದ ಏಗನಗೌಡ ತಿಳಿಸಿದರು.

ತಾಲೂಕು ಪಂಚಾಯತ್ ಸಭಾಭವನದಲ್ಲಿ ನಡೆದ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಧಿಕಾರಿಗಳು ಪ್ರತಿ ಅರ್ಹ ಫಲಾನುಭವಿಗೆ ಯೋಜನೆಯ ಸೌಲಭ್ಯ ತಲುಪುವಂತೆ ಶ್ರಮವಹಿಸಬೇಕು ಎಂದಿದ್ದಾರೆ.

**ಯೋಜನೆಗಳ ಪ್ರಗತಿ:** ತಾಲೂಕಿನಲ್ಲಿ ವಿವಿಧ ಸಾಂವಿಧಾನಿಕ ಯೋಜನೆಗಳು ಯಶಸ್ವಿಯಾಗಿ ಕಾರ್ಯಗತಗೊಂಡಿವೆ. ಗೃಹಲಕ್ಷ್ಮಿ ಯೋಜನೆಯಡಿ ಒಟ್ಟು 57,008 ಮಹಿಳೆಯರು ಫಲಾನುಭವಿಯಾಗಿದ್ದು, ಅವರ ಖಾತೆಗಳಿಗೆ 27 ಕಂತುಗಳ ಹಣ ನೇರವಾಗಿ ಜಮೆಯಾಗಿದೆ, ಇದರ ಮೊತ್ತ ರೂ. 564.56 ಲಕ್ಷವಾಗಿದೆ. ಗೃಹಜ್ಯೋತಿ ಯೋಜನೆಯ ಪ್ರಯೋಜನದಿಂದ 60,484 ಗ್ರಾಹಕರು ಲಾಭಾಂಶ ಪಡೆದಿದ್ದು, ಇದರ ವೆಚ್ಚ ರೂ. 5,232.79 ಲಕ್ಷವಾಗಿದೆ.

ಅನ್ನಭಾಗ್ಯ ಯೋಜನೆಯಡಿ 52,525 ಫಲಾನುಭವಿಗಳಿಗೆ ಸರ್ಕಾರದ ಹೊಸ ಆದೇಶದಂತೆ ಪ್ರತಿಯೊಬ್ಬರಿಗೆ 5 ಕೆಜಿ ಹೆಚ್ಚುವರಿ ಅಕ್ಕಿ ವಿತರಣೆ ಮಾಡಲಾಗಿದೆ. ಯುವನಿಧಿ ಯೋಜನೆಯ ಅಡಿ 2,745 ಪದವೀಧರರು ಹಾಗೂ 68 ಡಿಪ್ಲೋಮಾ ಪದವೀಧರರಿಗೆ ಕ್ರಮವಾಗಿ ರೂ. 8,49,84,000 ಮತ್ತು ರೂ. 7,74,000 ಹಣ ಹಂಚಲಾಗಿದೆ. ಶಕ್ತಿ ಯೋಜನೆಯ ಮೂಲಕ ಮಹಿಳೆಯರು ಉಚಿತ ಪ್ರಯಾಣ ಸೌಲಭ್ಯವನ್ನು ಪಡೆದಿದ್ದು, ಇದಕ್ಕೆ ಸಂತೋಷ ವ್ಯಕ್ತಪಡಿಸಿದ್ದಾರೆ.

ಸಭೆಯಲ್ಲಿ ಅಧ್ಯಕ್ಷರು ಅಧಿಕಾರಿ ಕಾರ್ಯವನ್ನು ಶ್ಲಾಘಿಸಿ, "ಯಾವುದೇ ಅರ್ಹ ಫಲಾನುಭವಿಯು ತಾಂತ್ರಿಕ ಕಾರಣಗಳಿಂದ ಯೋಜನೆಯಿಂದ ವಂಚಿತರಾಗದಂತೆ ಗಮನವಿರಿಸಬೇಕು. ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ಇನ್ನಷ್ಟು ಶ್ರಮಿಸುವಂತೆ ನಿರ್ದೇಶನ ನೀಡಲಾಗಿದೆ" ಎಂದರು.

ಸಭೆಯಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಗಂಗಾಧರ ಕಂದಕೂರ, ಗ್ಯಾರಂಟಿ ಸಮಿತಿಯ ಸದಸ್ಯರು ಚಂದ್ರಶೇಖರ್ ಕದಂ, ಸಿದ್ದಪ್ಪ ಅಗಸಿಮನಿ, ಪರಮೇಶ್ವರ ಕರಿಕಟ್ಟಿ, ರಾಜೇಶ್ ಚವ್ಹಾಣ, ಮಂಜುನಾಥ ಉಡಕೇರಿ, ಕಾರ್ತಿಕ್ ಗೋಕಾಕ್, ಕಲಾವತಿ ಮತ್ತು ಸಿಬ್ಬಂದಿಗಳು ಹಾಜರಿದ್ದರು.

**ಹಗರಿಬೊಮ್ಮನಹಳ್ಳಿ ರೈತ ಸಂಪರ್ಕ ಕೇಂದ್ರದಲ್ಲಿ ಕ್ಷೇತ್ರೋತ್ಸವ ಸಮಾರಂಭ**

# ಸಾವಯವ, ನೈಸರ್ಗಿಕ ಕೃಷಿ ಅಳವಡಿಕೆಗೆ ರೈತರಿಗೆ ಮಾರ್ಗದರ್ಶನ




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಹಗರಿಬೊಮ್ಮನಹಳ್ಳಿ ರೈತ ಸಂಪರ್ಕ ಕೇಂದ್ರದಲ್ಲಿ ಆಹಾರ ಮತ್ತು ಪೌಷ್ಟಿಕ ಭದ್ರತಾ ಯೋಜನೆ ಹಾಗೂ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನದಡಿ ಕ್ಷೇತ್ರೋತ್ಸವ ಸಮಾರಂಭವನ್ನು ರೈತರಿಗೆ ಆಯೋಜಿಸಲಾಗಿತ್ತು.

ಸಮಾರಂಭವನ್ನು ಉದ್ಘಾಟಿಸಿದ ಹಡಗಲಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಚಂದ್ರಕಾಂತ್ ಖಾಲಿಬಾವಿ ಅವರು ಸಾವಯವ ಕೃಷಿ ಮತ್ತು ನೈಸರ್ಗಿಕ ಕೃಷಿಯ ಮಹತ್ವವನ್ನು ವಿವರಿಸಿ, ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳಲು ರೈತರು ಇಂತಹ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ರೈತ ಸಂಪರ್ಕ ಕೇಂದ್ರದ ಅಧಿಕಾರಿ ಮಹೇಶ್ ಮಾತನಾಡಿ, ಸಾವಯವ ಕೃಷಿಯಲ್ಲಿ ಕೀಟಗಳು ಮತ್ತು ರೋಗ ನಿಯಂತ್ರಣದ ವಿಧಾನಗಳು ಹಾಗೂ ರಾಸಾಯನಿಕ ಕೀಟನಾಶಕಗಳಿಂದ ಪರಿಸರಕ್ಕೆ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ವಿವರಿಸಿದರು.

ಕೊಟ್ರಗೌಡ, ಶಂಕರ್ ರೆಡ್ಡಿ, ಕಾಮೇಶ್ ಸೇರಿದಂತೆ ಹಲವು ರೈತ ಮುಖಂಡರು ಉಪಸ್ಥಿತರಿದ್ದರು. ಕೃಷಿ ಇಲಾಖೆಯ ಸಿಬ್ಬಂದಿಗಳಾದ ಭೋಜನಾಯಕ್, ನಿಂಗಪ್ಪ, ಚೇತನ್, ಪ್ರವೀಣ್ ಭಾಗವಹಿಸಿದ್ದರು.

> "ನೈಸರ್ಗಿಕ ಮತ್ತು ಸಾವಯವ ಕೃಷಿ ಪದ್ಧತಿಗಳನ್ನು ಅನುಸರಿಸುವುದರಿಂದ ಮಣ್ಣಿನ ಗುಣಮಟ್ಟ ಉಳಿಯುವುದರೊಂದಿಗೆ ಆರೋಗ್ಯಕರ ಬೆಳೆ ಪಡೆಯಬಹುದು"
> – **ಚಂದ್ರಕಾಂತ್ ಖಾಲಿಬಾವಿ**, ವಿಜ್ಞಾನಿ,

**ಅಂಬೇಡ್ಕರ್-ಜಗಜೀವನ ರಾಂ ಜಯಂತಿ: ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸ್ನೇಹಲ್ ಆರ್ ಮಾಹಿತಿ**

# ಧಾರವಾಡದಲ್ಲಿ ಅದ್ದೂರಿ ಆಚರಣೆಗೆ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಹಸಿರು ಕ್ರಾಂತಿಯ ಹರಿಕಾರ ಹಾಗೂ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ 119ನೇ ಜಯಂತಿಯನ್ನು ಎಪ್ರಿಲ್ 5ರಂದು ಮತ್ತು ಸಂವಿಧಾನ ಶಿಲ್ಪಿ, ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಎಪ್ರಿಲ್ 14ರಂದು ಧಾರವಾಡ ಜಿಲ್ಲಾಮಟ್ಟದಲ್ಲಿ ಅದ್ದೂರಿಯಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ತಿಳಿಸಿದ್ದಾರೆ.




ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾಡಳಿತದ ವತಿಯಿಂದ ಆಯೋಜಿಸಲಾದ ಪೂರ್ವಭಾವಿ ಸಭೆಯಲ್ಲಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಯಂತಿ ಅಂಗವಾಗಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗಾಗಿ ವಿಚಾರ ಸಂಕಿರಣಗಳು ಮತ್ತು ವಿಶೇಷ ಉಪನ್ಯಾಸಗಳನ್ನು ಆಯೋಜಿಸಲಾಗುತ್ತದೆ. ಅಂಬೇಡ್ಕರ್ ಭವನದಲ್ಲಿ ವಿಚಾರ ಸಂಕಿರಣ ನಡೆಯಲಿದ್ದು, ಜಯಂತಿ ದಿನದಂದು ನಗರದ ಪ್ರಮುಖ ಬೀದಿಗಳಲ್ಲಿ ಮಹನೀಯರ ಭಾವಚಿತ್ರಗಳೊಂದಿಗೆ ಭವ್ಯ ಮೆರವಣಿಗೆ ಹಮ್ಮಿಕೊಳ್ಳಲಾಗುತ್ತದೆ. ವೇದಿಕೆ ಕಾರ್ಯಕ್ರಮವನ್ನು ಕರ್ನಾಟಕ ವಿದ್ಯಾವರ್ಧಕ ಸಂಘದ ಡಾ. ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ನಡೆಸಲಾಗುತ್ತದೆ ಎಂದು ಅವರು ವಿವರಿಸಿದರು.

ಕಳೆದ ವರ್ಷದ ಎಸ್ಎಸ್ಎಲ್ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಸಾಧನೆಗೈದ ವಿದ್ಯಾರ್ಥಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಗುತ್ತದೆ ಎಂದು ತಿಳಿಸಿದರು.

ಸಾರ್ವಜನಿಕರು ಕೇವಲ ಹಾಜರಾಗುವುದಷ್ಟೇ ಅಲ್ಲದೆ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಮಹನೀಯರ ಜೀವನ ಸಾಧನೆಗಳು, ಸಮಾಜ ಸೇವೆ ಹಾಗೂ ಸಮಾನತೆಯ ಸಂದೇಶಗಳನ್ನು ಜನರಿಗೆ ತಲುಪಿಸುವುದು ಆಚರಣೆಯ ಮುಖ್ಯ ಉದ್ದೇಶವಾಗಿರಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಸೇರಿದಂತೆ ಹಲವರು ತಮ್ಮ ಸಲಹೆ-ಸೂಚನೆಗಳನ್ನು ನೀಡಿದರು.

> ಹುಬ್ಬಳ್ಳಿ-ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್ ಮಾತನಾಡಿ, ಜಯಂತಿಗಳು ಎಲ್ಲಾ ಸಮುದಾಯಗಳ ಪಾಲ್ಗೊಳ್ಳುವಿಕೆಯಿಂದ ಮಾತ್ರ ಅರ್ಥಪೂರ್ಣವಾಗುತ್ತವೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಗುರುತಿಸಿ ಗೌರವಿಸುವ ಮೂಲಕ ಕಾರ್ಯಕ್ರಮಗಳಿಗೆ ಹೆಚ್ಚಿನ ಮೆರುಗು ನೀಡಬಹುದು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಎಂ. ಅರವಿಂದ, ಲಕ್ಷ್ಮಣ ಬಕ್ಕಾಯಿ, ಸುರೇಶ ಖಾನಪುರೆ, ನಿರ್ಮಲಾ ಚಲವಾದಿ, ಸುಶೀಲಮ್ಮ ಚಲವಾದಿ, ಅಶೋಕ ದೊಡಮನಿ, ಕಲ್ಮೇಶ ಹಾದಿಮನಿ, ದೇವಾನಂದ ರತ್ನಾಕರ್, ಕೆಂಚಪ್ಪ ಮಲ್ಲಮ್ಮನವರ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು.

ವೇದಿಕೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಉಪಸ್ಥಿತರಿದ್ದರು.

# 12ನೇ ಶತಮಾನ ಕರ್ನಾಟಕದ ಸುವರ್ಣಯುಗ

■ವಿಜಯಸಾಕ್ಷಿ ಸುದ್ದಿ, ಮುಳಗುಂದ



12ನೇ ಶತಮಾನವು ಕರ್ನಾಟಕದ ಇತಿಹಾಸದಲ್ಲಿ ಸುವರ್ಣಯುಗವಾಗಿದ್ದು, ಶಿವಶರಣರು ಮತ್ತು ವಚನಕಾರರು ಸಮಾಜಮುಖಿ ಬದುಕಿನ ಮೂಲಕ ಮಹತ್ತರ ಸಂದೇಶಗಳನ್ನು ನೀಡಿದ್ದಾರೆ ಎಂದು ಗುರುಸಿದ್ದಪ್ಪ ವಿಜಾಪೂರ ಹೇಳಿದರು.

ಪಟ್ಟಣದ ಸಂಗನಪೇಟಿ ಓಣಿಯ ಈಶ್ವರ ದೇವಸ್ಥಾನದ ಸಭಾಭವನದಲ್ಲಿ ಗದಗ ಹಾಗೂ ಮುಳಗುಂದ ಶರಣ ಸಾಹಿತ್ಯ ಪರಿಷತ್ತು ಮತ್ತು ಕದಳಿ ವೇದಿಕೆ ವತಿಯಿಂದ ಆಯೋಜಿಸಿದ್ದ "ಮನೆ ಮನದಲ್ಲಿ ಶರಣ ಸಂಸ್ಕೃತಿ" ಕಾರ್ಯಕ್ರಮದಲ್ಲಿ ದೇವರ ದಾಸಿಮಯ್ಯ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.


ಶಿವಶರಣರು ತಮ್ಮ ಜೀವನವನ್ನೇ ಸಮಾಜದ ಒಳಿತಿಗಾಗಿ ಮುಡಿಪಾಗಿಟ್ಟವರು. ಕಾಯಕ ನಿಷ್ಠೆ, ತ್ಯಾಗ ಮತ್ತು ಸಮಾನತೆಯ ಸಂದೇಶವನ್ನು ಸಾರಿದವರು. ಆಸೆ-ಆಕಾಂಕ್ಷೆಗಳನ್ನು ತೊರೆದು, ಎಲ್ಲರೂ ಒಂದಾಗಿ ಬದುಕುವ ಆದರ್ಶವನ್ನು ಪ್ರತಿಪಾದಿಸಿದವರು ಎಂದು ಅವರು ಹೇಳಿದರು. ಇಂದಿನ ವೇಗದ ಜೀವನದಲ್ಲಿ ಪ್ರೀತಿ, ನಂಬಿಕೆ ಮತ್ತು ವಿಶ್ವಾಸದೊಂದಿಗೆ ಬದುಕುವುದು ಅತ್ಯಂತ ಅಗತ್ಯವಾಗಿದ್ದು, ದೇವರ ದಾಸಿಮಯ್ಯನವರ ವಚನಗಳು ನಮ್ಮ ಬದುಕಿಗೆ ದಾರಿದೀಪವಾಗಿವೆ ಎಂದು ತಿಳಿಸಿದರು.

ಮಕ್ಕಳಲ್ಲಿ ಶರಣ ಸಂಸ್ಕೃತಿ ಬೆಳೆಸುವ ನಿಟ್ಟಿನಲ್ಲಿ ನಿತ್ಯ ವಚನ ಪಠಣಕ್ಕೆ ಉತ್ತೇಜನ ನೀಡಬೇಕೆಂದು ಅವರು ಕರೆ ನೀಡಿದರು. ಈ ಸಂದರ್ಭದಲ್ಲಿ ಮಂಜುನಾಥ ಮಟ್ಟಿ ಅವರ ತಾಯಿಯ ಹೆಸರಿನ ಅವ್ವಾ ಸೇವಾ ಟ್ರಸ್ಟ್ ರಾಜ್ಯ ಮಟ್ಟದ ಪ್ರಶಸ್ತಿ ಪಡೆದ ಹಿನ್ನೆಲೆ ಅವರಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮಕ್ಕೆ ಬಿ.ಜಿ. ಯಳವತ್ತಿ ಅಧ್ಯಕ್ಷತೆ ವಹಿಸಿದ್ದರು. ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷೆ ಕೆ.ಎ. ಬಳಿಗೇರ, ಡಾ. ಎಸ್.ಸಿ. ಚವಡಿ, ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಂಜುನಾಥ ಮಟ್ಟಿ ಕದಳಿ ವೇದಿಕೆಯ ಅಧ್ಯಕ್ಷೆ ರಾಜೇಶ್ವರಿ ಬಡ್ನಿ, ವಿರುಪಾಕ್ಷಪ್ಪ ಹಾಳಕೇರಿ, ವೀರಭದ್ರಪ್ಪ ಹರ್ತಿ, ಈರಣ್ಣ ತಡಸದ, ಸಂಜಯ ನೀಲಗುಂದ, ಪ್ರಕಾಶ ಮದ್ದಿನ, ಮಂಜುನಾಥ ಗುಲಗಂಜಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# "ಶಿಲ್ಪಾ ಶ್ರೀನಿವಾಸ್" ಚಿತ್ರದ ಹಾಡಿನಲ್ಲಿ ಹೆಜ್ಜೆ ಹಾಕಿದ ನಟ ಅಭಿಜಿತ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಸ್ನೇಹಾಲಯಂ ಕ್ರಿಯೇಷನ್ಸ್ ಲಾಂಛನದಲ್ಲಿ ಅಹಿನಾ ಮನೋ, ಮಂಜುನಾಥ್ ಗೌರಜಿ ನಿರ್ಮಾಣದ ಹಾರರ್, ಸಸ್ಪೆನ್ಸ್, ಥ್ರಿಲ್ಲರ್ ಕಥೆ ಹೊಂದಿರುವ "ಶಿಲ್ಪಾ ಶ್ರೀನಿವಾಸ್" ಚಿತ್ರದ "ಈ ಸಿನಿಮಾ ಅಂತೀವಲ್ಲಾ ಅದು ದೊಡ್ಡ.." ಸ್ಪೆಷಲ್ ಹಾಡಿಗೆ ಹಿರಿಯ ನಟ ಅಭಿಜಿತ್ ಅವರು ಹೆಜ್ಜೆ ಹಾಕಲಿದ್ದಾರೆ.

ಪ್ರತಾಪ್ ಭಟ್ ಸಾಹಿತ್ಯಕ್ಕೆ ಅನಿರುದ್ಧ ಶಾಸ್ತ್ರಿ ಸಂಗೀತ ಸಂಯೋಜನೆ ಮಾಡಿದ್ದಾರೆ. ಶಿಲ್ಪಾ ಶ್ರೀನಿವಾಸ್ ಚಿತ್ರವು ಸಿನಿಮಾ ಇಂಡಸ್ಟ್ರಿಯಲ್ಲಿನ ಅಳುಕು, ತೊಡಕುಗಳನ್ನು ಎತ್ತಿ ತೋರಿಸುವ ಕಥಾವಸ್ತುವನ್ನು ಹೊಂದಿದೆ. ಈ ಚಿತ್ರ ಹೊಸಕೋಟೆ, ವೈಟ್ ಫೀಲ್ಡ್, ಬೆಳ್ಳಿಕೆರೆ, ವಾಲೇಪುರ, ಭಕ್ತರಹಳ್ಳಿ, ಕೂಗೂರು, ಗಟ್ಟಿಗನಬ್ಬೆ ಮೊದಲಾದ ಕಡೆ ಚಿತ್ರೀಕರಣ ಮಾಡಲಾಗಿದೆ.

ಚಿತ್ರದಲ್ಲಿ ಖ್ಯಾತ ನಿರ್ಮಾಪಕರು, ವಿತರಕರೂ ಆದ ಶಿಲ್ಪಾ ಶ್ರೀನಿವಾಸ್ ಅವರೊಂದಿಗೆ ಶೋಭರಾಜ್, ನಾಗೇಂದ್ರ ಅರಸ್, ಶಂಖನಾದ ಆಂಜಿನಪ್ಪ, ಅನ್ನಪೂರ್ಣ, ನಂದಿನಿ ಕಮ್ಮಯ್ಯ, ಪಂಚಾಕ್ಷರಯ್ಯ, ಮರಿಸ್ವಾಮಿ, ವೀರ ಧನುಷ್ಯ, ಕಿಶೋರ ಕಾಸರಗೋಡು, ಸ್ವಾತಿ ಲಿಂಗರಾಜ್, ಬೆಂಗಳೂರು ಮನು, ಪ್ರಿಯ ಮೊದಲಾದವರು ನಟಿಸಿದ್ದಾರೆ.

ಪ್ರಮೋದ್ ಭಾರತೀಯ ಛಾಯಾಗ್ರಹಣ, ಅನಿರುದ್ಧ ಶಾಸ್ತ್ರಿ ಸಂಗೀತ, ಪ್ರತಾಪ್ ಭಟ್ ಸಾಹಿತ್ಯ, ಅಲ್ಟಿಮೇಟ್ ಶಿವು ಸಾಹಸ, ಮಲ್ಲಿಕಾರ್ಜುನ ಕಲೆ, ಮೋಹನ್ ಕುಮಾರ್ ಪ್ರಸಾಧನ. ಇಂದ್ರಕುಮಾರ್ ಸ್ಥಿರ ಚಿತ್ರಣ, ಡಿ.ಮಲ್ಲಿ ಸಂಕಲನ, ಸಾನ್ವಿ ನೃತ್ಯ ನಿರ್ದೇಶನ, ಎಂ.ಜಿ. ಕಲ್ಲೇಶ್, ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ ಪಿ.ಆರ್.ಓ ಅಗಿದ್ದಾರೆ.

ಕೆ.ಮಲ್ಲಿ ವಡ್ಡರಹಟ್ಟಿ ಸಹ ನಿರ್ದೇಶನ. ಈಗಾಗಲೇ ಹಲವಾರು ಚಿತ್ರಗಳನ್ನು ನಿರ್ದೇಶಿಸಿರುವ ಬಹುಭಾಷಾ ಯುವ ನಿರ್ದೇಶಕ ರಾಜೀವ್ ಕೃಷ್ಣ ಗಾಂಧಿ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ.

# ಜಗದಂಬಾ ಶಾಲೆಯ ವಿದ್ಯಾರ್ಥಿಗೆ ಮೈಕಲ್ ಎಂಜಿಲೋ ರಾಷ್ಟ್ರಪ್ರಶಸ್ತಿ!

■ವಿಜಯಸಾಕ್ಷಿ ಸುದ್ದಿ, ಗದಗ



ಕಲಾಕುಂಜ ಫೌಂಡೇಶನ್ ಆಫ್ ಆರ್ಟ್ಸ್ ಸೊಸೈಟಿ, ರಾಜಸ್ಥಾನ ಭಿವಾಡಿ ಅವರ ಸಂಯುಕ್ತ ಆಶ್ರಯದಲ್ಲಿ ನಡೆದ ರಾಜ್ಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಚಿತ್ರಕಲಾ ಸ್ಪರ್ಧೆ ಮತ್ತು ಪ್ರದರ್ಶನದಲ್ಲಿ, ಗದಗ-ಬೆಟಗೇರಿ ಎಸ್.ಎಸ್.ಕೆ. ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿ ಮಂಜುನಾಥ ವಿ. ಗೌರಿ ಮೈಕಲ್ ಎಂಜಿಲೋ ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಯ ಈ ಸಾಧನೆ ಶಾಲೆಗೆ ಹೆಮ್ಮೆ ತಂದಿದ್ದು, ಚಿತ್ರಕಲೆ ಮತ್ತು ಕರಕುಶಲ ತರಬೇತಿ ನೀಡಿದ ಕಲಾವಿದ ಡಾ. ಜಾಕೀರ ಹುಸೇನ್ ಎಂ. ಕೊರ್ಲಹಳ್ಳಿ ಅವರಿಗೆ ಕೂಡ ಶಾಲೆಯ ಆಡಳಿತ ಮಂಡಳಿ ಮತ್ತು ಶಿಕ್ಷಕರು ಹಾರ್ದಿಕ ಅಭಿನಂದನೆ ಸಲ್ಲಿಸಿದ್ದಾರೆ.

ಎಸ್.ಎಸ್.ಕೆ. ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಲೋಕನಾಥ್ ಕಬಾಡಿ, ಚೇರ್ಮನ್ ಗೋವಿಂದರಾಜ್ ಬಸವಾ, ವಾಯ್ಸ್ ಚೇರ್ಮನ್ ದತ್ತು ಯು. ಪವಾರ, ಪ್ರೌಢಶಾಲೆಯ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಶಿಲ್ಪಾ ಬಿ. ಬೆಣಕಲ್, ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಸಿ.ಎಸ್. ಹವಳದ ಮತ್ತು ಸರ್ವ ಶಿಕ್ಷಕ-ಶಿಕ್ಷಕಿಯರು ವಿದ್ಯಾರ್ಥಿ ಮತ್ತು ತರಬೇತಿ ನೀಡಿದ ಕಲಾವಿದರ ಸಾಧನೆಯನ್ನು ಮೆಚ್ಚಿಕೊಂಡು ಅಭಿನಂದಿಸಿದ್ದಾರೆ.

**ಮಾ. 29ರಂದು ಗದಗದಲ್ಲಿ ಕ್ರಿಕೆಟ್ ಟ್ಯಾಲೆಂಟ್ ಹಂಟ್**

# ಯುವ ಆಟಗಾರರಿಗೆ ಸುವರ್ಣಾವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ ಆಶ್ರಯದಲ್ಲಿ ಜಿಲ್ಲಾ ಮಟ್ಟದ ಕ್ರಿಕೆಟ್ ಆಟಗಾರರ ಆಯ್ಕೆ ಪ್ರಕ್ರಿಯೆ ಮಾರ್ಚ್ 29ರಂದು ಗದಗದ ಕೆ.ಹೆಚ್. ಪಾಟೀಲ ನೆಟ್ ಪ್ರ್ಯಾಕ್ಟಿಸ್ ಟರ್ಫ್ ಮೈದಾನದಲ್ಲಿ ನಡೆಯಲಿದೆ ಎಂದು ಸ್ಪೋರ್ಟ್ಸ್ ಅಕಾಡಮಿ ಆಫ್ ಗದಗ ಸಂಚಾಲಕ ಮುನ್ನಾ ಗುಳೇದಗುಡ್ಡ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಈ ಆಯ್ಕೆ ಪ್ರಕ್ರಿಯೆಯಲ್ಲಿ 14, 16 ಹಾಗೂ 19 ವರ್ಷದೊಳಗಿನ ವಯೋಮಿತಿಯ ಆಟಗಾರರನ್ನು ಆಯ್ಕೆ ಮಾಡಲಾಗುತ್ತದೆ. ವಯೋಮಿತಿಯ ಪ್ರಕಾರ ಪ್ರತ್ಯೇಕ ಸಮಯದಲ್ಲಿ ಟ್ರಯಲ್ಸ್ ನಡೆಯಲಿದ್ದು, ಅರ್ಹ ಅಭ್ಯರ್ಥಿಗಳು ನಿಗದಿತ ಸಮಯಕ್ಕೆ ಹಾಜರಾಗಬೇಕಾಗಿದೆ.

**ಆಯ್ಕೆ ಪ್ರಕ್ರಿಯೆಯ ವೇಳಾಪಟ್ಟಿ**

14 ವರ್ಷ ವಯೋಮಿತಿ (U-14):
ಜನನ ದಿನಾಂಕ: 01-09-2012 ರಿಂದ 31-08-2014
ಸಮಯ: ಬೆಳಿಗ್ಗೆ 8:00 ಗಂಟೆ
16 ವರ್ಷ ವಯೋಮಿತಿ (U-16):
ಜನನ ದಿನಾಂಕ: 01-09-2010 ರಿಂದ 31-08-2012
ಸಮಯ: ಬೆಳಿಗ್ಗೆ 10:30 ಗಂಟೆ
19 ವರ್ಷ ವಯೋಮಿತಿ (U-19):
ಜನನ ದಿನಾಂಕ: 01-09-2007 ರಿಂದ 31-08-2010
ಸಮಯ: ಮಧ್ಯಾಹ್ನ 12:30 ಗಂಟೆ

**ಅಗತ್ಯ ದಾಖಲೆಗಳು**

ಆಧಾರ್ ಕಾರ್ಡ್, ಜನನ ಪ್ರಮಾಣ ಪತ್ರ, ಎಸ್.ಎಸ್.ಎಲ್.ಸಿ ಅಂಕಪಟ್ಟಿ (U-19 ಆಟಗಾರರಿಗೆ ಕಡ್ಡಾಯ) ಹೆಚ್ಚಿನ ಮಾಹಿತಿಗಾಗಿ ಮ್ಯಾನೇಜರ್: ಶಿವು ಕರಡಿ ಮೊ: 9886360438, ಅಸ್ಲಾಂ ಮುಧೋಳ ಮೊ: 9739567030, ಆದಿತ್ಯ ಜೋಶಿ ಮೊ: 8197916696

# ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನೇ ಬಲಿದಾನ ಮಾಡಿದ ಮಹಾ ಕ್ರಾಂತಿಕಾರಿ ಭಗತ್ ಸಿಂಗ್

■ವಿಜಯಸಾಕ್ಷಿ ಸುದ್ದಿ, ಮುಳಗುಂದ




ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನೇ ಬಲಿದಾನ ನೀಡಿದ್ದು ಕ್ರಾಂತಿಕಾರಿ ಭಗತ್ ಸಿಂಗ್ ಎಂದು ಡಾ. ಎಸ್.ಸಿ.ಚವಡಿ ಹೇಳಿದರು.

ಪಟ್ಟಣದ ರೇಣುಕಾ ಯಲ್ಲಮ್ಮಾ ದೇವಸ್ಥಾನದಲ್ಲಿ ಬಲಿದಾನ ದಿನ ಕಾರ್ಯಕ್ರಮದಲ್ಲಿ ಭಗತ್ ಸಿಂಗ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಭಾರತ ಸ್ವಾತಂತ್ರ್ಯ ಪಡೆಯಲು ಅತಿ ಚಿಕ್ಕ ವಯಸ್ಸಿನಲ್ಲಿ ಹೋರಾಟದ ಹಾದಿ ಹಿಡಿಯುವ ಮೂಲಕ ತಮ್ಮ ಪ್ರಾಣವನ್ನೇ ಬಲಿದಾನ ಮಾಡಿದ ಮಹಾ ಕ್ರಾಂತಿಕಾರಿ ಭಗತ್ ಸಿಂಗ್ ಹಾಗೂ ರಾಜಗುರು ಮತ್ತು ಸುಖದೇವ ಅವರನ್ನು ಬ್ರಿಟಿಷರು ನೇಣಿಗೇರಿಸಿದ ದಿನವನ್ನು ಬಲಿದಾನ ದಿನವನ್ನಾಗಿ ಆಚರಣೆ ಮಾಡಲಾಗುತ್ತಿದೆ. ಅವರ ತ್ಯಾಗ ಬಲಿದಾನ ಯುವಕರಿಗೆ ಪ್ರೇರಣೆಯಾಗಿದೆ ಎಂದರು.

ಯೋಗ ಗುರು ಪ್ರಕಾಶ ಮದ್ದಿನ 15 ವರ್ಷಗಳಿಂದ ಉಚಿತ ಯೋಗ ಶಿಕ್ಷಣ ನೀಡುವುದರ ಜೊತೆಯಲ್ಲಿ ದಾರ್ಶನಿಕರು, ಸಂತರ, ಸ್ವಾತಂತ್ರ್ಯ ಹೋರಾಟಗಾರರ ಮಕ್ಕಳಿಗೆ ಪಾಠ ಮತ್ತು ಪ್ರವಚನ ಮಾಡುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಹೇಳಿದರು.

ಯೋಗ ಶಿಕ್ಷಕ ಪ್ರಕಾಶ ಮದ್ದಿನ, ಶಿವಾನಂದ ಆಪ್ತಗೇರಿ, ವಿ.ಡಿ. ಸಿದ್ದನಗೌಡರ ಹಾಗೂ ಮಕ್ಕಳು ಇದ್ದರು.

# 19 ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಗಳ ನೇಮಕ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಅವಧಿ ಮುಗಿದಿರುವ ಗ್ರಾಮ ಪಂಚಾಯಿತಿಗಳಲ್ಲಿ ಇನ್ನು ಮುಂದೆ ಸ್ಥಳೀಯ ಸಮಸ್ಯೆಗಳು, ಕುಡಿಯುವ ನೀರು ಹಾಗೂ ಅಭಿವೃದ್ಧಿ ಕಾರ್ಯಗಳ ನಿರ್ವಹಣೆಗಾಗಿ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ತಾಲೂಕಿನ ಒಟ್ಟು 21 ಗ್ರಾಮ ಪಂಚಾಯಿತಿಗಳ ಪೈಕಿ ಹಂಪಾಪಟ್ಟಣ ಹಾಗೂ ಮುತ್ತುಕೂರು ಗ್ರಾಮ ಪಂಚಾಯಿತಿಗಳನ್ನು ಹೊರತುಪಡಿಸಿ ಉಳಿದ 19 ಗ್ರಾಮ ಪಂಚಾಯಿತಿಗಳಿಗೆ ಜಿಲ್ಲಾಡಳಿತ ಆಡಳಿತಾಧಿಕಾರಿಗಳನ್ನು ನೇಮಿಸಿ ಆದೇಶ ಹೊರಡಿಸಿದೆ.

### ನೇಮಕಗೊಂಡ ಆಡಳಿತಾಧಿಕಾರಿಗಳ ವಿವರ

1. ಹನಸಿ ಮತ್ತು ಮಾಲವಿ ಗ್ರಾಮ ಪಂಚಾಯಿತಿಗಳಿಗೆ – ತಾಲೂಕು ಪಂಚಾಯಿತಿ ಕಾರ್ಯನಿರ್ವಹಕ ಅಧಿಕಾರಿಗಳು
2. ದಶಮಾಪುರ – ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿ
3. ಬೆಣಕಲ್ – ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು
4. ಹಂಪಸಾಗರ – ತಹಶೀಲ್ದಾರರು, ಹಗರಿಬೊಮ್ಮನಹಳ್ಳಿ
5. ಬನ್ನಿಕಲ್ – ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ
6. ಮೋರಗೆರೆ ಮತ್ತು ಸೊನ್ನ – ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು
7. ತಂಬ್ರಳ್ಳಿ – ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ
8. ಮರಬ್ಬಿಹಾಳ – ರೇಷ್ಮೆ ಇಲಾಖೆಯ ವಿಸ್ತಾರಣಾಧಿಕಾರಿ
9. ಬಾಚಿಗೊಂಡನಹಳ್ಳಿ – ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು
10. ಬನ್ನಿಗೋಳ – ಪಶುಸಂಗೋಪನೆ ಇಲಾಖೆಯ ಸಹಾಯಕ ನಿರ್ದೇಶಕರು
11. ಬ್ಯಾಸಿಗಿದೇರಿ – ಸಹಾಯಕ ಕೃಷಿ ನಿರ್ದೇಶಕರು
12. ಹಲಗಪುರ – ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳು
13. ಕಡ್ಲೆಬಾಳು ಮತ್ತು ಮಾದುರು – ತಾಲೂಕು ಪಂಚಾಯಿತಿ ಯೋಜನಾಧಿಕಾರಿಗಳು
14. ನೆಲಕುದುರಿ – ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು
15. ಗದ್ದಿಕೆರೆ – ಮಧ್ಯಾಹ್ನ ಬಿಸಿ ಊಟ ಯೋಜನೆಯ ಸಹಾಯಕ ನಿರ್ದೇಶಕರು
16. ವಲಬಪುರ – ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರು

ಲಕ್ಷ್ಮೇಶ್ವರದಲ್ಲಿ ಮಹಿಳಾ ಆರೋಗ್ಯ ತಪಾಸಣಾ ಶಿಬಿರದಲ್ಲಿ ಡಾ. ರಾಜಶ್ರೀ

# ಮಹಿಳೆಯರ ಆರೋಗ್ಯದತ್ತ ಹೆಚ್ಚಿನ ಕಾಳಜಿ ಅಗತ್ಯ!



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಆರೋಗ್ಯಕರ, ಸ್ವಾಸ್ಥ್ಯಪೂರ್ಣ, ಶಾಂತಿ ಮತ್ತು ನೆಮ್ಮದಿಯುತ ಸಮಾಜ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಮಹಿಳೆಯರು ತಮ್ಮ ಆರೋಗ್ಯದತ್ತ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಹುಬ್ಬಳ್ಳಿಯ ಸುಚಿರಾಯು ಆಸ್ಪತ್ರೆಯ ಡಾ. ರಾಜಶ್ರೀ ಅಭಿಪ್ರಾಯಪಟ್ಟರು.

ಪಟ್ಟಣದ ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆಯಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ತಾಲೂಕು ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ, ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ಹಾಗೂ ಟಾಟಾ ಎಐಜಿ ಸಹಯೋಗದಲ್ಲಿ ಆಯೋಜಿಸಿದ್ದ ಮಹಿಳಾ ಆರೋಗ್ಯ ತಪಾಸಣಾ ಶಿಬಿರದಲ್ಲಿ ಅವರು ಆರೋಗ್ಯದ ಮಹತ್ವ ಕುರಿತು ಉಪನ್ಯಾಸ ನೀಡಿದರು.

ನಿತ್ಯದ ಜೀವನದ ಜಂಜಾಟ ಮತ್ತು ಒತ್ತಡದ ನಡುವೆಯೂ ಮಹಿಳೆಯರು ಆರೋಗ್ಯಕರ ಜೀವನಶೈಲಿಗಳನ್ನು ಅಳವಡಿಸಿಕೊಳ್ಳುವುದು ಅವಶ್ಯಕ ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕಿ ವಿಜಯಲಕ್ಷ್ಮಿ ಕರಾಟೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಲಲಿತಾ ಮೆಕ್ಕಿ, ಎಲ್. ಎನ್. ನಂದೆಣ್ಣವರ, ಲಲಿತಾ ಕೆರಿಮನಿ, ನಿರ್ಮಲಾ ಅರಳಿ, ಪ್ರತಿಮಾ ಮಹಾಜನಶೆಟ್ಟರ, ನಂದಿನಿ ಮಾಳವಾಡ, ರತ್ನಾ ಕರ್ಕಿ, ಅಶ್ವಿನಿ ಅಂಕಲಕೋಟಿ, ಡಿ.ಎಫ್. ಪಾಟೀಲ ಹಾಗೂ ಜಯಶ್ರೀ ಮತ್ತಿಕಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಕಸಾಪ ದತ್ತಿ ಪ್ರಶಸ್ತಿ ಪುರಸ್ಕೃತರಾದ ಸರೋಜಾ ಬನ್ನೂರ ಅವರನ್ನು ಸನ್ಮಾನಿಸಲಾಯಿತು.

ಶಿಬಿರದಲ್ಲಿ ನೂರಾರು ಮಹಿಳೆಯರು ಆರೋಗ್ಯ ತಪಾಸಣೆಯಲ್ಲಿ ಪಾಲ್ಗೊಂಡಿದ್ದು, ಡಾ. ರಾಜಶ್ರೀ, ಡಾ. ವೀರೇಶ ಮಾಗಳದ, ಹರೀಶಗೌಡ, ಸೋಮನಾಥ ಕಾಳೆ ಮತ್ತು ಈರಣ್ಣ ನಾಗತಾಣ ಅವರು ಆರೋಗ್ಯ ಪರೀಕ್ಷೆ ನಡೆಸಿದರು.

ಮಾರುಕಟ್ಟೆ ಸ್ಥಳ ನಿಗದಿ  ಬ್ಯಾಂಕ್ ಖಾತೆ, ಸಿಬಿಲ್ ಸ್ಕೋರ್ ಕಾಪಾಡಿಕೊಳ್ಳಲು ಸಲಹೆ

# ಬೀದಿಬದಿ ವ್ಯಾಪಾರಿಗಳಿಗೆ ಸಾಲ ಸೌಲಭ್ಯ ಜಾಗೃತಿ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಬೀದಿಬದಿ ವ್ಯಾಪಾರಿಗಳು ತಮ್ಮ ವ್ಯವಹಾರಗಳನ್ನು ಸುಸೂತ್ರವಾಗಿ ನಡೆಸುವುದರೊಂದಿಗೆ ಬ್ಯಾಂಕ್ ವ್ಯವಹಾರಗಳತ್ತ ಹೆಚ್ಚಿನ ಗಮನ ಹರಿಸಿ ಸಿಬಿಲ್ ಸ್ಕೋರ್ ಕಾಪಾಡಿಕೊಳ್ಳಬೇಕು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಹಾಗೂ ಉದ್ಯಮಶೀಲತೆ ಅಧಿಕಾರಿ ದೇವರಾಜ್ ಸಲಹೆ ನೀಡಿದರು.

ಪಟ್ಟಣದ ಪುರಸಭೆಯಲ್ಲಿ "ಡೇ ನಲ್ಮ್" ಯೋಜನೆಯಡಿ ಪ್ರಧಾನಮಂತ್ರಿ ಬೀದಿ ವ್ಯಾಪಾರಿಗಳ ಆತ್ಮನಿರ್ಭರ ನಿಧಿ (ಸ್ವನಿಧಿ) ಯೋಜನೆಯ ಪ್ರಯೋಜನಾರ್ಥ ಸಮೃದ್ಧಿ ಮೇಳ ಹಾಗೂ ಡಿಜಿಟಲ್ ಅರಿವು-ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ವ್ಯಾಪಾರಿಗಳು ಎಲ್ಲಿಯಾದರೂ ವ್ಯಾಪಾರ ನಡೆಸಬಹುದಾದರೂ ತಮ್ಮ ಬ್ಯಾಂಕ್ ಖಾತೆಗಳನ್ನು ಪಟ್ಟಣದ ಬ್ಯಾಂಕ್‌ಗಳಲ್ಲಿ ಹೊಂದಿರಬೇಕು. ಸರಿಯಾದ ಹಣಕಾಸು ವ್ಯವಹಾರಗಳಿಂದ ಭವಿಷ್ಯದಲ್ಲಿ ಕಡಿಮೆ ಬಡ್ಡಿ ದರದಲ್ಲಿ ಹೆಚ್ಚಿನ ಸಾಲಗಳನ್ನು ಪಡೆದು ಆರ್ಥಿಕವಾಗಿ ಅಭಿವೃದ್ಧಿ ಸಾಧಿಸಬಹುದಾಗಿದೆ



ಎಂದು ಹೇಳಿದರು.

ಪ್ರತಿಯೊಬ್ಬ ಬೀದಿಬದಿ ವ್ಯಾಪಾರಿಯೂ ಗುರುತಿನ ಚೀಟಿ ಹೊಂದಿದ್ದು, ಅವುಗಳನ್ನು ಅವಧಿ ಮುಗಿಯುವ ಮೊದಲು ನವೀಕರಿಸಿಕೊಳ್ಳಬೇಕು. ಪುರಸಭೆಯ ವ್ಯಾಪಾರಿಗಳ ಮಾರಾಟ ಸಮಿತಿ ಮೂಲಕ ಅವರ ಹಿತಾಸಕ್ತಿಗಾಗಿ ವಿವಿಧ ಯೋಜನೆಗಳನ್ನು ಜಾರಿಗೆ ತರುತ್ತಿರುವುದಾಗಿ ತಿಳಿಸಿದರು.

ಪುರಸಭೆ ಮುಖ್ಯಾಧಿಕಾರಿ ಎಂ.ಕೆ. ಮುಗುಳಿ ಮಾತನಾಡಿ, ಪಟ್ಟಣದಲ್ಲಿ ಬೀದಿ ಬದಿ ವ್ಯಾಪಾರಿಗಳಿಗೆ ಪ್ರತ್ಯೇಕ ಮಾರುಕಟ್ಟೆ ಸ್ಥಳವನ್ನು ಶಾಸಕರು ಈಗಾಗಲೇ ನಿಗದಿಪಡಿಸಿದ್ದು, ಶೀಘ್ರದಲ್ಲೇ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದರು.

ಎಲ್ಲಾ ವ್ಯಾಪಾರಿಗಳು ಪುರಸಭೆಯಿಂದ ಗುರುತಿನ ಚೀಟಿ ಪಡೆದು ನವೀಕರಣ ಮಾಡಿಸಿಕೊಳ್ಳಬೇಕು ಎಂದು ಸೂಚಿಸಿದರು.

> "ವ್ಯಾಪಾರಿಗಳು ಸರಿಯಾದ ಬ್ಯಾಂಕ್ ವ್ಯವಹಾರಗಳನ್ನು ನಡೆಸಿದರೆ ಕಡಿಮೆ ಬಡ್ಡಿದರದಲ್ಲಿ ಹೆಚ್ಚಿನ ಸಾಲ ಪಡೆದು ಆರ್ಥಿಕವಾಗಿ ಅಭಿವೃದ್ಧಿ ಸಾಧಿಸಬಹುದು."
> – ದೇವರಾಜ್,
> ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ

ಸಮುದಾಯ ಅಭಿವೃದ್ಧಿ ಅಧಿಕಾರಿ ಬಸವರಾಜ್ ಮಾತನಾಡಿ, ಪ್ರತಿಯೊಬ್ಬ ವ್ಯಾಪಾರಿಯೂ ಬ್ಯಾಂಕ್ ಖಾತೆ ತೆರೆಯುವುದು ಕಡ್ಡಾಯವಾಗಿದ್ದು, ಇದರ ಮೂಲಕ ಸರ್ಕಾರದ ವಿವಿಧ ಯೋಜನೆಗಳಡಿ ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯ ಪಡೆಯಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಷ್ಟ್ರೀಕೃತ ಬ್ಯಾಂಕ್‌ಗಳ ಅಧಿಕಾರಿಗಳು, ತಾಲೂಕು ಬೀದಿಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಮಂಜುನಾಥ, ಜಿಲ್ಲಾ ಸಂಘದ ಉಪಾಧ್ಯಕ್ಷ ಜಹಾಂಗೀರ್, ಕಂದಾಯ ಅಧಿಕಾರಿ ಮಾರಪ್ಪ ಸೇರಿದಂತೆ ಅನೇಕ ವ್ಯಾಪಾರಿಗಳು ಉಪಸ್ಥಿತರಿದ್ದರು.

# ರಾಷ್ಟ್ರೀಯ ಪ್ರಶಸ್ತಿ ವಿಜೇತ ಮುಖ್ಯೋಪಾಧ್ಯಾಯರಿಗೆ ಗೌರವ

■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಜಗದ್ಗುರು ವ್ಂಊರ್ಂಸಾವಿರ್ವ್ಂಠ ಮಹಾಸಂಸ್ಥಾನದಲ್ಲಿ ಶ್ರೀ ಗುರುಪಂಚಾಕ್ಷರಿ ಸೇವಾ ಸಮಿತಿ (ರಿ), ಗದಗ ಅವರ ಆಶ್ರಯದಲ್ಲಿ ವಿಶೇಷ ಗೌರವ ಸಮಾರಂಭ ನಡೆಯಿತು. ಈ ಸಂದರ್ಭದಲ್ಲಿ ಸಂಗೀತ ಉತ್ಸವ, ಪಂಚಾಕ್ಷರಿ ಗದಗ ರಾಷ್ಟ್ರೀಯ ಘರಾನಾ ಸಮ್ಮೇಳನ, ಮತ್ತು 2026ನೇ ಸಾಲಿನ ಗುರುಕುಮಾರ ಪಂಚಾಕ್ಷರಿ ರಾಷ್ಟ್ರೀಯ ಸಮ್ಮಾನ ಸಮಾರಂಭವನ್ನು ಆಯೋಜಿಸಲಾಗಿತ್ತು.

ಈ ಸಮಾರಂಭದಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ 2025–26ನೇ ಸಾಲಿನಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಗಾಗಿ





ರಾಜ್ಯ ಪ್ರಶಸ್ತಿ ಪಡೆದ ಪಂ. ಪಂಚಾಕ್ಷರಿ ಗವಾಯಿಗಳ ಅಂಧರ ವಸತಿಯುತ ಸಂಗೀತ ಶಾಲೆಯ ಮುಖ್ಯೋಪಾಧ್ಯಾಯ ಕೆ. ವ್ಹಿ. ಮುದ್ದಾಪೂರು ಅವರನ್ನು ಶ್ರೀ ಗುರು ಪಂಚಾಕ್ಷರಿ ಸೇವಾ ಸಮಿತಿ ಸನ್ಮಾನಿಸಿ ಪ್ರೋತ್ಸಾಹಿಸಿತು.

ಸಮಾರಂಭವನ್ನು ಸಮಿತಿಯ ಅಧ್ಯಕ್ಷರಾದ ಡಾ. ಪಂ. ರಾಜಗುರು ಗುರುಸ್ವಾಮಿ ಕಲಿಕೇರಿ, ಪ್ರಸಿದ್ಧ ಸಂಗೀತಗಾರರು ಮತ್ತು ಶ್ರೀಮನ್ ಮಹಾರಾಜ ನಿರಂಜನ ಜಗದ್ಗುರು ಡಾ. ಗುರುಸಿದ್ಧರಾಜಯೋಗೀಂದ್ರ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ನಡೆಸಲಾಯಿತು. ಸಮಿತಿಯ ಕಾರ್ಯದರ್ಶಿ ಮಲ್ಲಯ್ಯ ಶಿರೋಳಮಠ ಸೇರಿದಂತೆ ಎಲ್ಲಾ ಪದಾಧಿಕಾರಿಗಳು, ಸರ್ವ ಸದಸ್ಯರು ಮತ್ತು ಪಾಠಶಾಲೆಯ ಸರ್ವ ಸಿಬ್ಬಂದಿ ಪಾಲ್ಗೊಂಡು ಗೌರವ ಸಾಧನೆಯನ್ನು ಕೊಂಡಾಡಿದರು.

# "ಸುರಕ್ಷಿತ ಉತ್ಪನ್ನಗಳು, ಆತ್ಮವಿಶ್ವಾಸದ ಗ್ರಾಹಕರು"

▶▶ ಮೊದಲನೇ ಪುಟದಿಂದ

ಗ್ರಾಹಕರು ಯಾವುದೇ ವಸ್ತು ಖರೀದಿಸುವಾಗ ISI, FSSAI ಮುದ್ರೆಗಳು, ಅವಧಿ (Expiry Date) ಪರಿಶೀಲಿಸುವುದು ಕಡ್ಡಾಯ. ಜೊತೆಗೆ GST ರಶೀದಿ ಪಡೆಯುವುದು ಅಗತ್ಯ ಎಂದು ತಿಳಿಸಿದರು.

ಆನ್‌ಲೈನ್ ಖರೀದಿಗಳಲ್ಲಿ ಹೆಚ್ಚಿನ ಜಾಗ್ರತೆ ಅಗತ್ಯವಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎ.ಜಿ. ಮಾಲ್ದಾರ ಮಾತನಾಡಿ,

"ರಶೀದಿ ಪಡೆಯುವುದು ಗ್ರಾಹಕರ ಮೊದಲ ಕರ್ತವ್ಯ. ರಶೀದಿ ಇಲ್ಲದೆ ದೂರು ಸಲ್ಲಿಸಲು ಸಾಧ್ಯವಿಲ್ಲ" ಎಂದು ಹೇಳಿದರು.

'ಒಂದು ಕೊಂಡರೆ ಎರಡು ಉಚಿತ' ಆಮಿಷಗಳಿಗೆ ಒಳಗಾಗುವ ಮೊದಲು ಉತ್ಪಾದನಾ ದಿನಾಂಕ, ಅವಧಿ, ತೂಕ ಮತ್ತು ಅಳತೆಯನ್ನು ಪರಿಶೀಲಿಸುವುದು ಗ್ರಾಹಕರ ಹಕ್ಕು ಎಂದು ತಿಳಿಸಿದರು.

ಕುಲಪತಿಗಳು ಪ್ರೊ. ಡಾ. ಸುರೇಶ್ ವಿ. ನಾಡಗೌಡರ, ಡಿ.ವೈ.ಎಸ್.ಪಿ ಮಹಾಂತೇಶ್ ಸಜ್ಜನ್, ಕಾನೂನು ಸಲಹೆಗಾರ ಎಸ್.ಜಿ. ಪಲ್ಲೇದ, ಯಶೋಧಾ ಪಾಟೀಲ, ಗುರುರಾಜ್ ಗೌರಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಶತಾಯುಷಿಗಳು ಮತ್ತು ಮಹಿಳಾ ಸಾಧಕರಿಗೆ ಸನ್ಮಾನ

# ಹಿರಿಯರ ಮಾರ್ಗದರ್ಶನದಿಂದ ಉತ್ತಮ ಸಮಾಜ ನಿರ್ಮಾಣ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿರಿಯ ನಾಗರಿಕರ ಜೀವನಾನುಭವ ಮತ್ತು ಜ್ಞಾನ ಸಮಾಜಕ್ಕೆ ದಾರಿದೀಪವಾಗಿದ್ದು, ಅವರ ಮಾರ್ಗದರ್ಶನದಲ್ಲಿ ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ರಾಜ್ಯ ಘಟಕದ ಮಹಿಳಾ ಅಧ್ಯಕ್ಷೆ ಸುನಂದಾ ಬೆನ್ನೂರ ಹೇಳಿದರು.

ಪಟ್ಟಣದ ಚಂಬಣ್ಣ ಬಾಳಿಕಾಯಿ ಅವರ ಮಿಲ್ಲಿನ ಆವರಣದಲ್ಲಿ ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾದ ಶತಾಯುಷಿಗಳು ಹಾಗೂ ಮಹಿಳಾ ಸಾಧಕರ ಸನ್ಮಾನ ಕಾರ್ಯಕ್ರಮದಲ್ಲಿ ಅವರು





ಮಾತನಾಡಿದರು.

ಮಹಿಳೆ ಸಮಾಜದ ಕಣ್ಣಾಗಿದ್ದು, ಕುಟುಂಬದ ಶ್ರೇಯೋಭಿವೃದ್ಧಿಯ ಮೂಲಕ ಸಮಗ್ರ ಸಮಾಜದ ಅಭಿವೃದ್ಧಿಗೆ ಕಾರಣವಾಗುತ್ತಾಳೆ. ಮಹಿಳೆ ಶಿಕ್ಷಣವಂತಳಾದಾಗ ಮಾತ್ರ ಸುಶಿಕ್ಷಿತ ಮತ್ತು ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ. ಪ್ರಸ್ತುತ ಕಾಲದಲ್ಲಿ ಮಹಿಳೆಯರು ಸಮಾನತೆ, ಸರ್ಕಾರದ ಸೌಲಭ್ಯಗಳು ಮತ್ತು ಸಂವಿಧಾನಾತ್ಮಕ ಹಕ್ಕುಗಳನ್ನು ಸದುಪಯೋಗಪಡಿಸಿಕೊಂಡು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಬೇಕು ಎಂದು ಅವರು ಹೇಳಿದರು.

ಹಿರಿಯ ಸಾಹಿತಿ ಲಲಿತಕ್ಕ ಕೆರಿಮನಿ ಮಾತನಾಡಿ,

> "ವ್ಂಹಿಳೆ' ಶಿಕ್ಷಣವಂತಳಾದಾಗ ಮಾತ್ರ ಸುಶಿಕ್ಷಿತ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ"
> – ಸುನಂದಾ ಬೆನ್ನೂರ

ಸಾಧನೆಯಿಂದ ಮಹಿಳೆಗೆ ಗೌರವ ಲಭಿಸುತ್ತದೆ. ಸಂಕಷ್ಟ ಎದುರಾದರೂ ಮಹಿಳೆಯರು ಎದೆಗುಂದದೇ ಮನೋಬಲದಿಂದ ಮುಂದುವರೆಯಬೇಕು ಎಂದರು.

ಮಾಲಾದೇವಿ ದಂದರಗಿ ಹಿರಿಯ ನಾಗರಿಕರ ಕುರಿತು ಮಾತನಾಡಿ, ಹಿರಿಯರಿಗೆ ಗೌರವಯುತ ಜೀವನದ ವಾತಾವರಣ ಕಲ್ಪಿಸುವುದು ಅಗತ್ಯ. ಸ್ವಾವಲಂಬನೆಗಾಗಿ ಸರ್ಕಾರಗಳು ಹೆಚ್ಚಿನ ಯೋಜನೆಗಳನ್ನು ರೂಪಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ, ಚಂಬಣ್ಣ ಬಾಳಿಕಾಯಿ, ಪ್ರತಿಮಾ ಮಹಾಜನಶೆಟ್ಟರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಆಯ್.ಎಸ್. ಮಡಿವಾಳರ ಮತ್ತು ಮಹಾನಂದ ಕೊಣ್ಣೂರ ಕಾರ್ಯಕ್ರಮ ನಿರೂಪಿಸಿದರು.

### ಸನ್ಮಾನಿತರ ವಿವರ

ಶತಾಯುಷಿಗಳು: ಪಾರ್ವತೆಮ್ಮ ಪುರಾಣಿಕಮಠ, ಸಾವಿತ್ರಮ್ಮ ಹೂವಿನ, ಸೀಮಮ್ಮ ಅರಳಿ, ಸೋಮವ್ವ ಚಕ್ರಸಾಲಿ

ಮಹಿಳಾ ಸಾಧಕರು: ಲಲಿತಕ್ಕ ಕೇರಿಮನಿ, ಮೀನಾಕ್ಷಿ ಮಟ್ಟಿ, ಸವಿತಾ ಆದಿ, ಮಂಜುಳಾ ಹೂಗಾರ, ಸುನಂದಾ ಬೆನ್ನೂರ, ಮಾಲಾದೇವಿ ದಂದರಗಿ, ರೇಣುಕಾ ನವಲಗುಂದ, ಎಸ್.ಸಿ. ಅಳಗವಾಡಿ

ಲೈಂಗಿಕ ಅಲ್ಪಸಂಖ್ಯಾತರ ಹಕ್ಕುಗಳ ತಿದ್ದುಪಡಿ ವಿರೋಧಿಸಿ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ

# ಕೇಂದ್ರದ ಮಸೂದೆ ವಿರೋಧಿಸಿ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ಲೈಂಗಿಕ ಅಲ್ಪಸಂಖ್ಯಾತರ ಹಕ್ಕುಗಳ ತಿದ್ದುಪಡಿ ಮಸೂದೆ 2026 ವಿರುದ್ಧ ಲಿಂಗತ್ವ ಮತ್ತು ಲೈಂಗಿಕ ಬಹುತ್ವಕ್ಕಾಗಿ ಚಳುವಳಿ ಸಂಘಟನೆ ಮೂಲಕ ಗದಗದಲ್ಲಿ ಶಾಂತಿಯುತ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು,

ಮನವಿ ಸಲ್ಲಿಸಿ ಮಾತನಾಡಿದ ಆದಿತ್ಯ ಎಂ.ಜಿ.ಎಸ್.ಟಿ. ಶಾಂತಿಯುತ ಪ್ರತಿಭಟನೆ ನಡೆಸಿದ್ದೇವೆ. ಈ ಮಸೂದೆಗೆ ನಮ್ಮ ತೀವ್ರ ಖಂಡನೆ ಮತ್ತು ವಿರೋಧವನ್ನು ವ್ಯಕ್ತಪಡಿಸಲು ಈ ಪತ್ರವನ್ನು ಬರೆಯುತ್ತಿದ್ದೇವೆ. ಈ ಮಸೂದೆ ಲಿಂಗತ್ವ ಅಲ್ಪಸಂಖ್ಯಾತ ಸಮುದಾಯಗಳ ಗೌರವವನ್ನು ಗಂಭೀರವಾಗಿ ಹಾಳು ಮಾಡುತ್ತದೆ, ಲಿಂಗತ್ವ ಅಲ್ಪಸಂಖ್ಯಾತರ



ಗುರುತಿನ ಸ್ವಯಂ-ನಿರ್ಣಯದ ಹಕ್ಕನ್ನು ಕಸಿದುಕೊಳ್ಳುತ್ತದೆ ಮತ್ತು ಲಿಂಗತ್ವ ಅಲ್ಪಸಂಖ್ಯಾತ ವ್ಯಕ್ತಿಗಳಿಗೆ ಸಂವಿಧಾನ ನೀಡಿರುವ ರಕ್ಷಣೆಗಳಿಗೆ ಧಕ್ಕೆಯನ್ನುಂಟು ಮಾಡುತ್ತದೆ. ನಿಮ್ಮ ಮೂಲಕ, ಭಾರತ ಸರ್ಕಾರವು ಈ ತಿದ್ದುಪಡಿಯನ್ನು ಹಿಂತೆಗೆದುಕೊಳ್ಳಬೇಕು ಎಂದು ನಾವು ದೃಢವಾಗಿ ಆಗ್ರಹಿಸುತ್ತೇವೆ ಎಂದರು.

ಸಂಸ್ಥೆಯವರು ಭಾರತೀಯ ಸುಪ್ರೀಂ ಕೋರ್ಟ್‌ನ OISA v. UTIO (2014) ತೀರ್ಪನ್ನು ಉಲ್ಲೇಖಿಸಿ, 2017ರಲ್ಲಿ ಕರ್ನಾಟಕ ಸರ್ಕಾರದ ಲಿಂಗತ್ವ ಅಲ್ಪಸಂಖ್ಯಾತರ ರಾಜ್ಯ ನೀತಿ ಪ್ರಕಾರ ಸಮುದಾಯದ ವೈಯಕ್ತಿಕ ಮತ್ತು ಸಮೂಹಿಕ ಹಕ್ಕುಗಳನ್ನು ರಕ್ಷಿಸುವ ಮಾರ್ಗದರ್ಶನ ನೀಡಲಾಗಿದೆ ಎಂದು ಹೇಳಿದರು. ಪ್ರಸ್ತಾವಿತ ತಿದ್ದುಪಡಿ ಈ ತತ್ವಗಳಿಗೆ ವಿರುದ್ಧವಾಗಿದೆ. 'ಟ್ರಾನ್ಸ್‌ಜೆಂಡರ್' ಎಂಬ ಕಾನೂನು ವ್ಯಾಖ್ಯೆಯನ್ನು ಸೀಮಿತಗೊಳಿಸುವ ಮೂಲಕ ಸಮುದಾಯದ ದೊಡ್ಡ ವಿಭಾಗವನ್ನು ಹೊರಹೊಮ್ಮಿಸುತ್ತದೆ ಎಂದು ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಇದಲ್ಲದೆ ತಿದ್ದುಪಡಿ ವೈದ್ಯಕೀಯ ಮಂಡಳಿಗಳ ಮೂಲಕ ಲಿಂಗತ್ವ ಗುರುತಿನ ಪ್ರಮಾಣೀಕರಣ ಮತ್ತು ಖಾಸಗಿ ವೈದ್ಯಕೀಯ ಮಾಹಿತಿಯನ್ನು ಅಧಿಕಾರಿಗಳಿಗೆ ಬಹಿರಂಗಪಡಿಸುವ ಅಧಿಕಾರವನ್ನು ನೀಡುತ್ತದೆ. ಇದು ಸಮುದಾಯದ ಗೌಪ್ಯತೆ, ಮಾನಸಿಕ ಆರೋಗ್ಯ ಮತ್ತು ಸಂವಿಧಾನಾತ್ಮಕ ಹಕ್ಕುಗಳಿಗೆ ಧಕ್ಕೆ ಬೀರುವುದಾಗಿ ಪ್ರತಿಭಟನೆ ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಈ ಶಾಂತಿಯುತ ಪ್ರತಿಭಟನೆಯಲ್ಲಿ ಗದಗ ಜಿಲ್ಲಾ ಸಮಿತಿಯ ಪುಷ್ಪಾ, ಆರಾಧನಾ, ಸಿಂಚನಾ, ಶಾಲಿನಿ, ಈರಣ್ಣ, ಮಾಲತೇಶ, ಮತ್ತು 'ಕೋಅಲಿಷನ್ ಫಾರ್ ಸೆಕ್ಸ್ ವರ್ಕರ್ಸ್', ಸೆಕ್ಸುವಲ್ ಅಂಡ್ ಜೆಂಡರ್ ಮೈನಾರಿಟೀಸ್ ರೈಟ್ಸ್' ಸೇರಿದಂತೆ ವಿವಿಧ ಜನಪರ ಸಂಘಟನೆಗಳ ಪದಾಧಿಕಾರಿಗಳು ಮತ್ತು ಸದಸ್ಯರು ಪಾಲ್ಗೊಂಡಿದ್ದರು.

ರಂಗಗೀತೆ, ಉಪನ್ಯಾಸ, ಪ್ರಶಸ್ತಿ ಪ್ರದಾನ ಕಲಾಭಿಮಾನಿಗಳಿಗೆ ವಿಶೇಷ ಆಯೋಜನೆ

# ನಾಳೆ ವಿಶ್ವ ರಂಗಭೂಮಿ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು ಹಾಗೂ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ (ರಿ), ಗದಗ ಸಹಯೋಗದಲ್ಲಿ ಮಾರ್ಚ್ 27 ರಂದು ಸಂಜೆ 6 ಗಂಟೆಗೆ ಬೆಟಗೇರಿಯ ಶ್ರೀ ಕಾಳಿಕಾದೇವಿ ದೇವಸ್ಥಾನದ ಸಮುದಾಯ ಭವನದಲ್ಲಿ ವಿಶ್ವ ರಂಗಭೂಮಿ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ರಂಗಗೀತ ಗಾಯನ, ರಂಗ ಗೌರವ, ಉಪನ್ಯಾಸ ಹಾಗೂ 'ಚಿನ್ಮಯ ಕಲಾಶ್ರೀ' ಪ್ರಶಸ್ತಿ ಪ್ರದಾನ ನಡೆಯಲಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಅಧ್ಯಕ್ಷರು ಮತ್ತು ರಾಜ್ಯ ಉಪಾಧ್ಯಕ್ಷರಾದ ಡಾ. ಬಸವರಾಜ ಬಳ್ಳಾರಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷರಾದ ಡಾ. ಕೆ.ವಿ. ನಾಗರಾಜಮೂರ್ತಿ ಅವರು ಗೌರವ ಉಪಸ್ಥಿತರಿರಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಕಾಳಿಕಾದೇವಿ ದೇವಸ್ಥಾನ ಟ್ರಸ್ಟಿನ ಅಧ್ಯಕ್ಷರಾದ ಶ್ರೀಧರ ಕೊಣ್ಣೂರ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ಶಂಕ್ರಣ್ಣ ಸಂಕಣ್ಣವರ, ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ರಾಜಗೋಪಾಲ ಡಿ. ಕಡ್ಲಿಕೊಪ್ಪ ಹಾಗೂ ದೇವಸ್ಥಾನ ಟ್ರಸ್ಟಿನ ಸಾಂಸ್ಕೃತಿಕ ಸಂಚಾಲಕರಾದ ವಿಶ್ವನಾಥ ಯ. ಕಮ್ಮಾರ ಭಾಗವಹಿಸಲಿದ್ದಾರೆ.

ಹಿರಿಯ ರಂಗ ಕಲಾವಿದರಾದ ಪ್ರೊ. ಮುರಲೀಧರ ಸಂಕನೂರ ಅವರು 'ಸಶಕ್ತ ಸಮಾಜ ಕಟ್ಟುವಲ್ಲಿ ರಂಗಭೂಮಿಯ ಪಾತ್ರ' ಕುರಿತು ಉಪನ್ಯಾಸ ನೀಡಲಿದ್ದಾರೆ. ಚಲನಚಿತ್ರ, ಕಿರುತೆರೆ ಹಾಗೂ ರಂಗಕಲಾವಿದ ವಿಜಯಕುಮಾರ ಜಿತೂರಿ ಅವರ ತಂಡದಿಂದ ರಂಗಗೀತೆಗಳು ಪ್ರಸ್ತುತಗೊಳ್ಳಲಿವೆ.

ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಪ್ರಕಟಣೆಯಲ್ಲಿ ಮನವಿ ಮಾಡಿದೆ.

ಸ್ವಾತಂತ್ರ್ಯ ಉದ್ಯಾನವನದಲ್ಲಿ ಬಲ್ಡೋಟ ತೊಲಗಿಸಿ ಹೋರಾಟದಲ್ಲಿ ಬರಗೂರು ರಾಮಚಂದ್ರಪ್ಪ

# ಕೊಪ್ಪಳ ಬಲ್ಡೋಟ ಹೋರಾಟ ಐತಿಹಾಸಿಕ ಹಂತ ತಲುಪುತ್ತದೆ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಇಲ್ಲಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಕೊಪ್ಪಳ ಹಾಗೂ ಭಾಗ್ಯನಗರ ಭಾಗದ 20 ಗ್ರಾಮಗಳ ಜನರು ಬಲ್ಡೋಟ ಕೈಗಾರಿಕಾ ವಿಸ್ತರಣೆ ವಿರುದ್ಧ ಭಾರೀ ಪ್ರತಿಭಟನೆ ನಡೆಸಿ ಸರ್ಕಾರದ ಗಮನ ಸೆಳೆದಿದ್ದಾರೆ. ಸುಮಾರು 2 ಲಕ್ಷ ಜನರ ಆರೋಗ್ಯ ಮತ್ತು ಜೀವ ಭದ್ರತೆಗಾಗಿ ₹54 ಸಾವಿರ ಕೋಟಿ ವೆಚ್ಚದ ಬಲ್ಡೋಟ ವಿಸ್ತರಣೆ ಯೋಜನೆಯನ್ನು ಶಾಶ್ವತವಾಗಿ ನಿಲ್ಲಿಸಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಧರಣಿಯಲ್ಲಿ ಭಾಗವಹಿಸಿದ ಜನರು, ಬಲ್ಡೋಟದ ಪೆಲೆಟ್ ಘಟಕದ ಪರವಾನಗಿಯನ್ನು ರದ್ದುಪಡಿಸುವುದರ ಜೊತೆಗೆ, ಕಂಪನಿಯು ಅತಿಕ್ರಮಿಸಿಕೊಂಡಿರುವ ಬಸಾಪುರ ಕೆರೆಯ 44.35 ಎಕರೆ ಪ್ರದೇಶವನ್ನು ತಕ್ಷಣ ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಬೇಕು ಎಂದು ಆಗ್ರಹಿಸಿದರು. ಗಿಣಿಗೇರಿ, ಕನಕಾಪುರ, ಹಿರೇಬಗನಾಳ, ಅಲ್ಲಾನಗರ ಸೇರಿದಂತೆ ಹಲವು ಗ್ರಾಮಗಳ ಜನರು ವಿಷಾನಿಲ ಹೊರಸೂಸುವ ಕಾರ್ಖಾನೆಗಳನ್ನು ಕೇಂದ್ರ ಪರಿಸರ ಮತ್ತು ಹವಾಮಾನ ಬದಲಾವಣೆ ಇಲಾಖೆಯ ಶಿಫಾರಸಿನಂತೆ ಸ್ಥಳಾಂತರಿಸಬೇಕೆಂದು ಒತ್ತಾಯಿಸಿದರು.

ಪ್ರತಿಭಟನಾಕಾರರು ಸರ್ಕಾರದ 2007ರ ಕೆರೆ ಮಂಜೂರಾತಿ ಅಧಿಸೂಚನೆಯನ್ನು ರದ್ದುಗೊಳಿಸುವಂತೆ ಆಗ್ರಹಿಸಿದ್ದು, ತಜ್ಞರ ವರದಿಯ ಪ್ರಕಾರ ತುಂಗಭದ್ರಾ ನದಿ ನೀರು ಬಳಕೆಗೆ ಅಸಮರ್ಥವಾಗಿರುವ ಹಿನ್ನೆಲೆಯಲ್ಲಿ, ಮಾಲಿನ್ಯಕ್ಕೆ ಕಾರಣವಾಗಿರುವ ಕೈಗಾರಿಕೆಗಳನ್ನು ಮುಚ್ಚಬೇಕು ಎಂದು ಒತ್ತಾಯಿಸಿದರು. ಜೊತೆಗೆ, ಪರಿಸರ ಮತ್ತು ಆರೋಗ್ಯದ ಪರಿಣಾಮಗಳನ್ನು ಅಳೆಯಲು ಂಖಬಂಖ ಮೂಲಕ ಆರೋಗ್ಯ ಸಮೀಕ್ಷೆ ಹಾಗೂ ಖಖಖಿ ಮೂಲಕ ಪರಿಸರ ಸಮೀಕ್ಷೆ ನಡೆಸಬೇಕೆಂದು ಬೇಡಿಕೆ ಸಲ್ಲಿಸಿದರು. ಮಾಲಿನ್ಯದಿಂದ ಹಾನಿಗೊಳಗಾದ ಗ್ರಾಮಗಳ ಪುನರ್ವಸತಿಗಾಗಿ ವಿಶೇಷ ಪ್ಯಾಕೇಜ್ ಘೋಷಣೆ ಮಾಡುವಂತೆ ಸರ್ಕಾರವನ್ನು ಒತ್ತಾಯಿಸಿದರು.



ಹೋರಾಟಕ್ಕೆ ಬೆಂಬಲ ಸೂಚಿಸಿದ ನಾಡೋಜ ಡಾ. ಬರಗೂರು ರಾಮಚಂದ್ರಪ್ಪ ಮಾತನಾಡಿ, "ಜಾಗತೀಕರಣದ ಪರಿಣಾಮವಾಗಿ ಇಂತಹ ಸಮಸ್ಯೆಗಳು ದೇಶಾದ್ಯಂತ ಕಾಣಿಸುತ್ತಿವೆ. ಆದರೆ ಕೊಪ್ಪಳ ಜನ ಜೀವ ಉಳಿಸುವ ಹೋರಾಟ ನಡೆಸುತ್ತಿರುವುದು ವಿಶಿಷ್ಟ. ಈ ಹೋರಾಟ ಐತಿಹಾಸಿಕವಾಗಿ ದಾಖಲಾಗಲಿದೆ" ಎಂದು ಅಭಿಪ್ರಾಯಪಟ್ಟರು.

ಕೊಪ್ಪಳ ಮಾಜಿ ಸಂಸದರಾದ ಸಂಗಣ್ಣ ಕರಡಿ ಧರಣಿ ಬೆಂಬಲಿಸಿ ಮಾತನಾಡಿ, ಒಂದು ಲಕ್ಷ ರೂ. ದೇಣಿಗೆ ಘೋಷಣೆ ಮಾಡಿದರು. ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ಅವರು ಧರಣಿ ಬೆಂಬಲಿಸಿ ಮಾತನಾಡಿದರು.

"ಜನರ ನೋವು ನನಗೆ ಗೊತ್ತಿದೆ. ಈ ಹೋರಾಟದೊಂದಿಗೆ ನಾನಿದ್ದೇನೆ. ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸುತ್ತೇನೆ"

– ಕೆ. ರಾಘವೇಂದ್ರ ಹಿಟ್ನಾಳ, ಶಾಸಕ, ಕೊಪ್ಪಳ

ಧರಣಿಯಲ್ಲಿ ಬಡಗಲಪುರ ನಾಗೇಂದ್ರ, ಎಚ್. ಆರ್. ಬಸವರಾಜಪ್ಪ, ಸೂರ್ಯಕಾಂತ ಗುಣಕಿಮಠ, ಮಲ್ಲಿಕಾರ್ಜುನ ಸ್ವಾಮಿ ಹಿರೇಮಠ, ವೀರೇಶ ಮಹಾಂತಯ್ಯನಮಠ, ರಾಜು ಬಾಕಳೆ, ಸರೋಜಾ ಬಾಕಳೆ, ಸಾವಿತ್ರಿ ಮಜುಂದಾರ್, ಡಾ. ಮಂಜುನಾಥ ಸಜ್ಜನ್, ರಮೇಶ ತುಪ್ಪದ, ಸಂತೋಷ ದೇಶಪಾಂಡೆ, ಮಾಲಾ ಬಡಿಗೇರ, ಮಂಜುನಾಥ ಅಂಗಡಿ, ಶರಣಪ್ಪ ಸಜ್ಜನ್, ಈರಪ್ಪ ಕಂಬಳಿ, ಕೃಷ್ಣಾರಡ್ಡಿ

ಆರೋಗ್ಯ ಸಚಿವ ಡಾ. ಶರಣಪ್ರಕಾಶ ಪಾಟೀಲ್, ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿ, "ಈ ವಿಷಯವನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಸರ್ಕಾರ ಜನರ ಆರೋಗ್ಯದ ಪರ ನಿಲ್ಲುತ್ತದೆ" ಎಂದು ಭರವಸೆ ನೀಡಿದರು.

ಗಲಿಬಿ, ಸಾಹಿತಿ ಕಾಶಿನಾಥ್ ಅಂಬಲಗಿ, ರಂಗ ನಿರ್ದೇಶಕ ಸೂರ್ಯಕಾಂತ ಗುಣಕಿಮಠ, ಸಾಹಿತಿ ಈರಪ್ಪ ಕಂಬಳಿ, ಪತ್ರಕರ್ತ ಟಿ. ಟಿ. ಕಸ್ತೂರಿ, ಎಐಯುಕೆಎಸ್ ರಾಜ್ಯಾಧ್ಯಕ್ಷ ಡಿ. ಎಚ್. ಪೂಜಾರ್, ಶಿಕ್ಷಣ ಉಳಿತಸಿ ಸಮಿತಿಯ ರಾಷ್ಟ್ರೀಯ ಉಪಾಧ್ಯಕ್ಷ ವಿಎನ್ ರಾಜಶೇಖರ ಪರಿಸರಕ್ಕಾಗಿ ನಾವು ಸಂಘಟನೆಯ ಗೌರವಾಧ್ಯಕ್ಷ ಆಂಜನೇಯ ರೆಡ್ಡಿ, ಕಥೆಗಾರ ಮಲ್ಲಿಕಾರ್ಜುನ್ ಹಿರೇಮಠ, ಉಪನ್ಯಾಸಕ ರಾಜೇಶ್ ಭಟ್, ಜ್ಞಾನ ವಿಜ್ಞಾನ ಸಮಿತಿ ಕಾರ್ಯದರ್ಶಿ ಈ. ಬಸವರಾಜ, ಶಂಕರ ಹೂಗಾರ, ಡಾ. ಬಸವರಾಜ ಪೂಜಾರ್, ಪ್ರಕಾಶಕ ಡಿ. ಎಂ. ಬಡಿಗೇರ್, ಮೂಕಪ್ಪ ಮೇಸ್ತ್ರಿ ಬಸಾಪುರ, ಬಸವರಾಜ್ ಪೂಜಾರ್, ಶರಣು ಪಾಟೀಲ್, ಮಹೇಶ ವದ್ನಾಳ, ವಿದ್ಯಾ ನಾಲ್ವಾಡ, ವಿಶಾಲಾಕ್ಷಿ ಹಳಪೇಟಿ, ಹಿರೇಬಗ್ನಾಳ ರತ್ನಮ್ಮ, ಹುಸೇನಮ್ಮ ಗಾಂಧಿನಗರ, ಗಣೇಶರೆಡ್ಡಿ ಕನಕಗಿರಿ, ಮಕ್ಬುಲ್ ರಾಯಚೂರು, ನಟರಾಜ ಸವಡಿ, ಚನ್ನವೀರಯ್ಯ ಹಿರೇಮಠ, ಯಮನೂರಪ್ಪ ಹಳ್ಳಿಕೇರಿ, ಹುಲಿಗೇಶ ಬೋವಿ, ಗಣೇಶ ವಿಶ್ವಕರ್ಮ, ಶ್ರೀನಿವಾಸ್ ಎಚ್ ಕಾಸನಕಂಡಿ, ಗಣೇಶ್ ರೆಡ್ಡಿ ಕನಕಗಿರಿ, ಸುಭಾನ್ ಸಾಬ್ ನೀರಲಗಿ, ಎಸ್. ಎಂ. ಕಂಬಾಳಿಮಠ, ಹನುಮಂತಪ್ಪ ಗೊಂದಿ, ಎಲ್ಲಪ್ಪ ಬಿ ಬಂಡಿ, ಮಂಜುನಾಥ ಕೊಂಡನಳ್ಳಿ, ಜಗದೀಶ್ ಕುಂಬಾರ, ಮಲ್ಲಪ್ಪ ಮೇಟಿ ಅನೇಕರು ಹಾಜರಿದ್ದರು.

## ಕುಸಲಾಪುರ ಶಾಲೆಯ ವಿದ್ಯಾರ್ಥಿ ನವೋದಯಕ್ಕೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ




ಶಿರಹಟ್ಟಿ ತಾಲೂಕಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕುಸಲಾಪುರದ ವಿದ್ಯಾರ್ಥಿ ಪವನಕುಮಾರ ಹುಲಗಪ್ಪ ಬಳ್ಳಾರಿ ಅವರು 2025–26ನೇ ಸಾಲಿನಲ್ಲಿ ನಡೆದ ನವೋದಯ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ನವೋದಯ ಕೇಂದ್ರೀಯ ಶಾಲೆಗೆ ಆಯ್ಕೆಯಾಗಿದ್ದಾರೆ.

ಈ ಸಾಧನೆಯಿಂದ ಶಾಲೆ ಹಾಗೂ ಗ್ರಾಮಕ್ಕೆ ಹೆಮ್ಮೆ ತಂದಿದ್ದಾರೆ. ವಿದ್ಯಾರ್ಥಿಯ ಸಾಧನೆಗೆ ಪ್ರಧಾನಗುರು ಎಂ.ಎಸ್. ಪೂಜಾರ, ಸಿಬ್ಬಂದಿ ವರ್ಗ, ಎಸ್‌ಡಿಎಂಸಿ ಅಧ್ಯಕ್ಷ ಎನ್.ಬಿ. ಭಂಡಾರಿ ಸೇರಿದಂತೆ ಸರ್ವ ಸದಸ್ಯರು, ಗ್ರಾಮಸ್ಥರು ಹಾಗೂ ಹಳೆಯ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿ ಶುಭಾಶಯ ಕೋರಿದ್ದಾರೆ.

## ಇಂದು ಉಚಿತ ಆರೋಗ್ಯ ತಪಾಸಣೆ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ




ವಿಶ್ವ ಕಿಡ್ನಿ ದಿನದ ಅಂಗವಾಗಿ ಸಂಕಲ್ಪ ಕಿಡ್ನಿ ಕೇರ್ ಫೌಂಡೇಶನ್, ಖಔಂ ಗದಗ, ಂಕಖ ಗದಗ ಹಾಗೂ ಲಯನ್ಸ್ ಕ್ಲಬ್ ಗದಗ ಇವರ ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಆಯೋಜಿಸಲಾಗಿದೆ.

ಮಧುಮೇಹ (Diabetes) ಮತ್ತು ರಕ್ತದೊತ್ತಡ (Hypertension) ಹೊಂದಿರುವ ರೋಗಿಗಳಲ್ಲಿ ಅಂತ್ಯ ಅಂಗ ಹಾನಿ (End Organ Damage) ಪತ್ತೆಹಚ್ಚುವ ಉದ್ದೇಶದಿಂದ ಈ ಶಿಬಿರವನ್ನು ನಡೆಸಲಾಗುತ್ತಿದೆ.

ಶಿಬಿರದಲ್ಲಿ ಫಂಡೋಸ್ಕೋಪಿ (ಕಣ್ಣಿನ ಪರೀಕ್ಷೆ) ಹಾಗೂ ಸೀರಂ ಕ್ರಿಯಾಟಿನಿನ್ (ಮೂತ್ರಪಿಂಡದ ಕಾರ್ಯ ಪರೀಕ್ಷೆ) ಪರೀಕ್ಷೆಗಳು ಉಚಿತವಾಗಿ ಮಾಡಲಾಗುತ್ತದೆ. ಮಧುಮೇಹ ಮತ್ತು ರಕ್ತದೊತ್ತಡ ಇರುವ ಎಲ್ಲಾ ನಾಗರಿಕರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ಆಯೋಜಕರು ಮನವಿ ಮಾಡಿದ್ದಾರೆ.

ಶಿಬಿರವು ಮಾರ್ಚ್ 26, 2026 ರಂದು ಸಂಜೆ 6.00ರಿಂದ 8.00 ಗಂಟೆಯವರೆಗೆ ಗದಗ ನಗರದ ಲಯನ್ಸ್ ಭವನದಲ್ಲಿ ನಡೆಯಲಿದ್ದು, ಗದಗ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ.

## ಸೈನಿಕ ಶಾಲೆಗೆ ಗೌತಮ್ ಧರ್ಮಪ್ಪ ಲಮಾಣಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನ ಅಡರಕಟ್ಟಿ ಗ್ರಾಮದ ಪಿಎಂಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ ಗೌತಮ್ ಧರ್ಮಪ್ಪ ಲಮಾಣಿ 2025–26 ನೇ ಸಾಲಿನ ನವೋದಯ ಕೇಂದ್ರೀಯ ವಿದ್ಯಾಲಯ ಮತ್ತು ಸೈನಿಕ್ ಶಾಲೆಗೆ ಆಯ್ಕೆಯಾಗಿದ್ದಾನೆ.

2025–26ನೇ ಸಾಲಿನಲ್ಲಿ ಅಡರಕಟ್ಟಿ ಪಿಎಂಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಿಂದ ಮೊಟ್ಟಮೊದಲ ವಿದ್ಯಾರ್ಥಿಯಾಗಿ ಗೌತಮ್ ಧರ್ಮಪ್ಪ ಲಮಾಣಿ ನವೋದಯ ಕೇಂದ್ರ ಶಾಲೆ ಮತ್ತು ಸೈನಿಕ್ ಶಾಲೆಗೆ ಆಯ್ಕೆಯಾಗಿದ್ದು, ಈತ ಎಲ್ಲಾ ಪಠ್ಯ ಮತ್ತು ಸಹಪಠ್ಯ ಚಟುವಟಿಕೆಗಳಲ್ಲಿ ಪ್ರತಿಭಾಶಾಲಿ ವಿದ್ಯಾರ್ಥಿಯಾಗಿದ್ದು, ಶೈಕ್ಷಣಿಕ ಮತ್ತು ಸೃಜನಾತ್ಮಕ ಸಾಧನೆಗಳಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾನೆ.

ಆಯ್ಕೆಯಾದ ವಿದ್ಯಾರ್ಥಿಗೆ ಅಡರಕಟ್ಟಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು, ಶಿಕ್ಷಣ ಪ್ರೇಮಿಗಳು ಗುರುಹಿರಿಯರು ಶಾಲೆಯ ಶಿಕ್ಷಕರು ಹರ್ಷ ವ್ಯಕ್ತಪಡಿಸಿದ್ದಾರೆ.

# ಮಹಿಳೆ ಮನೆ, ಸಮಾಜದ ಎರಡು ಕಣ್ಣುಗಳಿದ್ದಂತೆ!

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಹಿಳೆ ಮನೆಯ ಜೊತೆಯಲ್ಲಿ ಸಮಾಜದ ಎರಡು ಕಣ್ಣುಗಳು ಇದ್ದಂತೆ ಎಂದು ಎಸ್.ಎಂ.ನೀಲಗುಂದ ಹೇಳಿದರು.




ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದಲ್ಲಿ ಅನುಬಂಧ ಮಹಿಳಾ ವಿವಿಧೋದ್ದೇಶ ಸೇವಾ ಫೌಂಡೇಶನ್ ಉದ್ಘಾಟನೆ ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧಕರಿಗೆ ಸನ್ಮಾನ ಪ್ರಶಸ್ತಿ ಪ್ರಧಾನ ಸಮಾರಂಭದ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆ ಕೇವಲ ಅಡುಗೆ ಮನೆಗೆ ಸೀಮಿತಗೊಳಿಸದೆ ಮಹಿಳೆಯರನ್ನು ಸಮಾಜದಲ್ಲಿ ಗೌರವದಿಂದ ಪ್ರತಿಯೊಬ್ಬರೂ ಕಾಣಬೇಕು, ಮಹಿಳೆ ಮನೆಯಲ್ಲಿ ಮಾತ್ರವಲ್ಲದೆ ಸಮಾಜದಲ್ಲಿ ತನ್ನ ಛಾಪನ್ನು ಮೂಡಿಸಿದ್ದು ಎಲ್ಲಾ ರಂಗದಲ್ಲೂ ಇಂದು ಸಾಧನೆ ಮಾಡುತ್ತಿದ್ದಾಳೆ. ಮಹಿಳೆ ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಬೇರೆ ಬೇರೆ ಉದ್ಯೋಗದ ಕಡೆ ಗಮನ ಹರಿಸುತ್ತಿದ್ದು ಎಲ್ಲರ ಪ್ರೋತ್ಸಾಹದ ಅಗತ್ಯವಿದೆ. ಈ ಅನುಬಂದ ಸೇವಾ ಫೌಂಡೇಶನ್ ಮಹಿಳೆಯರ ಸಬಲಿಕರಣಕ್ಕೆ ಸಹಾಯ ಸಹಕಾರ ನೀಡುತ್ತಿರುವ ಕಾರ್ಯ ಶ್ಲಾಘನಿಯವಾದದ್ದು ಎಂದರು.

ಎ.ಡಿ.ಬಟ್ಟೂರ ಮಾತನಾಡಿ, ಮಹಿಳೆಯರು ಸಾಕಷ್ಟು ಅಭಿವೃದ್ಧಿ ಹೊಂದಲು ಸಾಕಷ್ಟು ಸಹಾಯ ಸಹಕಾರ ಸರಕಾರಗಳು ಮಾಡುತ್ತಿವೆ. ಅವುಗಳ ಸಹಕಾರ ಪಡೆದುಕೊಂಡು ಸ್ವಾವಲಂಬನೆ ಜೀವನ ಮಾಡುವ ಮೂಲಕ ಕುಟುಂಬದ ಆರ್ಥಿಕ ಅಭಿವೃದ್ಧಿ ಹೊಂದಲು ಸಹಕಾರಿಯಾಗಿದೆ ಎಂದರು.

ಈ ಸಮಯದಲ್ಲಿ ನಿಸ್ವಾರ್ಥ ಸೇವೆ ಮಾಡುತ್ತಿರುವ ಪೌರ ಕಾರ್ಮಿಕ ಮಹಿಳೆಯರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಗೀತಾ ಜಾಧವ್, ಎಸ್.ಸಿ.ಬಡ್ನಿ, ಬಿ.ವಿ. ಸುಂಕಾಪೂರ, ಡಾ.ಎಸ್.ಸಿ.ಚವಡಿ, ಹರ್ಷಲತಾ ದೇಶಪಾಂಡೆ, ಬಿ.ಕೆ.ಶಿವಾನಿಜಿ, ವೀಣಾ ಅಠವಲೆ, ಅಕ್ಕಮ್ಮಾ ನೀಲಗುಂದ, ಹರ್ಷಾ ಬಾರಕೇರ ಹಾಗೂ ಅನುಬಂಧ ಮಹಿಳಾ ವಿವಿಧೋದ್ದೇಶ ಸೇವಾ ಫೌಂಡೇಶನ್ ಸರ್ವ ಸದಸ್ಯರು ಭಾಗವಹಿಸಿದ್ದರು.

## ಶಾಂತಿಯುತ ಜರುಗಿದ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1ರ ಭಾಷೆ–2 ವಿಷಯದ ಪರೀಕ್ಷೆ ದಿನಾಂಕ 23–03–2026 ರಂದು ಯಾವುದೇ ಅಡಚಣೆಗಳಿಲ್ಲದೆ ಶಾಂತಿಯುತವಾಗಿ ನಡೆದಿದೆ.

ಜಿಲ್ಲೆಯ ಒಟ್ಟು 61 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆದಿದ್ದು, ಪ್ರತಿಯೊಂದು ಕೇಂದ್ರಕ್ಕೂ ಜಿಲ್ಲಾಧಿಕಾರಿಗಳಿಂದ ನೇಮಕಗೊಂಡ ವೀಕ್ಷಕರು ಹಾಜರಿದ್ದರು. ಉಪನಿರ್ದೇಶಕರ ಕಚೇರಿಯಿಂದ ಜಿಲ್ಲಾ ವೀಕ್ಷಕ ದಳ ಹಾಗೂ ಸ್ಥಳೀಯ ಜಾಗೃತ ದಳದ ಅಧಿಕಾರಿಗಳನ್ನು ನಿಯೋಜಿಸಲಾಗಿದ್ದು, ಪರೀಕ್ಷಾ ಕಾರ್ಯವು ಸಮರ್ಪಕವಾಗಿ ನಡೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿತ್ತು.

ಪರೀಕ್ಷೆಗೆ ಅಗತ್ಯವಾದ ಪ್ರಶ್ನೆಪತ್ರಿಕೆಗಳನ್ನು ನಿಗದಿತ ಅವಧಿಯಲ್ಲಿ ಎಲ್ಲಾ ಕೇಂದ್ರಗಳಿಗೆ ಸುರಕ್ಷಿತವಾಗಿ ತಲುಪಿಸಲಾಗಿತ್ತು. ಪರೀಕ್ಷೆ ಮುಗಿದ ಬಳಿಕ ಉತ್ತರ ಪತ್ರಿಕೆಗಳನ್ನು ಪೊಲೀಸ್ ಬಿಗಿ ಬಂದೋಬಸ್ತಿನಲ್ಲಿ ಭದ್ರತಾ ಕೊಠಡಿಯಲ್ಲಿ ಸಂಗ್ರಹಿಸಲಾಗಿದೆ. ಒಟ್ಟಾರೆ ಪರೀಕ್ಷೆ ಶಾಂತಿಯುತ ಮತ್ತು ವ್ಯವಸ್ಥಿತವಾಗಿ ನಡೆದಿರುವುದಾಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಆರ್. ಎಸ್. ಬುರಡಿ ತಿಳಿಸಿದ್ದಾರೆ.

ಯುಗಾದಿ–ರಂಜಾನ್ ಅಂಗವಾಗಿ ನಡೆದ ಕ್ರಿಕೆಟ್ ಟೂರ್ನಿ

## ಮುಂಬೈ ಇಂಡಿಯನ್ಸ್ ಗೆಲುವು–ಲಗಾನ್ ರನ್ನರ್ ಅಪ್



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಚಿಂತರಪಳ್ಳಿ ಗ್ರಾಮದಲ್ಲಿ ಯುಗಾದಿ ಹಾಗೂ ರಂಜಾನ್ ಹಬ್ಬದ ಅಂಗವಾಗಿ ದಿ. 17–03–2026 ರಿಂದ 23–03–2026ರವರೆಗೆ ನಾಲ್ಕನೇ ಆವೃತ್ತಿಯ ಚಿಂತರಪಳ್ಳಿ ಪ್ರೀಮಿಯರ್ ಲೀಗ್ ಸ್ಟಂಪರ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಈ ಟೂರ್ನಿಯಲ್ಲಿ ಒಟ್ಟು 6 ತಂಡಗಳು ಭಾಗವಹಿಸಿದ್ದು, ಅನಿಲ್ ಮಡಿವಾಳ್ ಅವರ ನೇತೃತ್ವದ ಮುಂಬೈ ಇಂಡಿಯನ್ಸ್ ತಂಡ ಅತ್ಯುತ್ತಮ ಪ್ರದರ್ಶನ ನೀಡಿ ಮೊದಲ ಬಹುಮಾನವನ್ನು ತನ್ನದಾಗಿಸಿಕೊಂಡಿತು. ದ್ವಿತೀಯ ಬಹುಮಾನವನ್ನು ಲಗಾನ್ ತಂಡ ಪಡೆದುಕೊಂಡಿತು.

ಪಂದ್ಯಾವಳಿಯ ಸಂಪೂರ್ಣ ಜವಾಬ್ದಾರಿಯನ್ನು ಜನಪ್ರಿಯ ಶಾಸಕ ಕೆ. ನೇಮಿರಾಜ್ ನಾಯ್ಕ ವಹಿಸಿಕೊಂಡಿದ್ದರು. ಟೂರ್ನಿಗೆ ಪುರಸಭೆ ಸದಸ್ಯ ಸುರೇಶ ಬಣಕಾರ, ಶಾಸಕರ ಆಪ್ತ ಸಹಾಯಕ ರಾಹುಲ್ ನಾಯ್ಕ, ಪುರಸಭೆ ನಾಮನಿರ್ದೇಶಿತ ಸದಸ್ಯ ಬಾರಿಕರ ಮಂಜುನಾಥ ಸೇರಿದಂತೆ ಹಲವರು ಬೆಂಬಲ ನೀಡಿದರು.

ಈ ಸಂದರ್ಭದಲ್ಲಿ ಹುಲಮನಿ ಮಂಜು, ಸಂದೀಪ್ ಬಾರಿಕರ, ಮಂಜುನಾಥ, ಪಿ. ಪ್ರಕಾಶ್, ಪ್ರಕಾಶ್ ಕೊಳ್ಳಿ, ಸಮೀರ, ದೈಹಿಕ ಶಿಕ್ಷಕ ಬಾರಿಕರ ವಿಶ್ವನಾಥ, ಗಜೇಂದ್ರ ಮಾಚಿ, ಹನುಮಂತಪ್ಪ ಓಬಳಾಪುರ, ತಳವಾರ ಹುಲುಗಪ್ಪ, ಮುನಾಫ್ ಸಾಬ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

2026–29 ಅವಧಿಗೆ ರಿಯಾಜ್ ಕೆ. ಖತೀಬ್ ಅಧ್ಯಕ್ಷರಾಗಿ ಅವಿರೋಧ ಆಯ್ಕೆ

# ಗದಗ ಜಿಲ್ಲಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಸಂಘಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ಸಹಕಾರಿ ಸಂಘಗಳ ನಿಯಮಗಳು 1960ರ ಅನ್ವಯ ನಿಯಮ 14(ಜಿ) ಪ್ರಕಾರ, 2026ರಿಂದ 2029ರವರೆಗೆ ಅವಧಿಗೆ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಜಿಲ್ಲಾ ಸಂಘ, ಗದಗದ ಚುನಾವಣಾ ಪ್ರಕ್ರಿಯೆ ಯಶಸ್ವಿಯಾಗಿ ಪೂರ್ಣಗೊಂಡಿದೆ.

ತಾಲೂಕ ಪಂಚಾಯತ್ ಗದಗದ ಸಹಾಯಕ ಲೆಕ್ಕಾಧಿಕಾರಿ ಸೋಮಶೇಖರ ಅವರು ಸಹಾಯಕ ರಿಟರ್ನಿಂಗ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಿ, ಚುನಾವಣೆಯನ್ನು ಸುಸೂತ್ರವಾಗಿ ನಡೆಸಿದರು. ಈ ಚುನಾವಣೆಯಲ್ಲಿ ಎಲ್ಲಾ ಹುದ್ದೆಗಳಿಗೆ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿರುವುದಾಗಿ ಅಧಿಕೃತವಾಗಿ ಘೋಷಿಸ ಲಾಗಿದೆ.

ನೂತನ ಪದಾಧಿಕಾರಿಗಳಿಗೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಂಘಟನೆಗಳ ಪ್ರತಿನಿಧಿಗಳು ಅಭಿನಂದನೆ ಸಲ್ಲಿಸಿ, ಸಂಘದ ಮುಂದಿನ ಕಾರ್ಯಚಟುವಟಿಕೆಗಳಿಗೆ ಶುಭ ಹಾರೈಸಿದ್ದಾರೆ.

### ಅವಿರೋಧವಾಗಿ ಆಯ್ಕೆಯಾದವರು

1. ಅಧ್ಯಕ್ಷರು: ರಿಯಾಜ್ ಕೆ. ಖತೀಬ್
2. ಉಪಾಧ್ಯಕ್ಷರು: ಮಂಜುನಾಥ ಗಣಿ
3. ಉಪಾಧ್ಯಕ್ಷರು (ಮಹಿಳೆ): ಶಿಲ್ಪಾ ಕವಲೂರ
4. ಖಜಾಂಚಿ: ಶಿವಲೀಲಾ ಅಂಗಡಿ
5. ರಾಜ್ಯ ಪರಿಷತ್ ಸದಸ್ಯರು: ಮಹೇಶ ಅಲ್ಲಿಪೂರ
6. ಸಂಘಟನಾ ಕಾರ್ಯದರ್ಶಿ: ಎಸ್.ವೈ. ಕುಂಬಾರ
7. ಸಂಘಟನಾ ಕಾರ್ಯದರ್ಶಿ (ಮಹಿಳೆ): ಸುಜಾತಾ ಕಪ್ಪಲಿ
8. ಸಾಂಸ್ಕೃತಿಕ ಕಾರ್ಯದರ್ಶಿ: ಜ್ಯೋತ್ಸ್ನಾ ಎಜ್ರಾ ಸಾಮುವೆಲ್
9. ಕ್ರೀಡಾ ಕಾರ್ಯದರ್ಶಿ: ಶರಣಪ್ಪ ನರೇಗಲ್
10. ಇದಲ್ಲದೆ, ಸಂಘದ ಗೌರವಾಧ್ಯಕ್ಷರಾಗಿ ಕುಮಾರ ಪೂಜಾರ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ.

## ವಿದ್ಯಾರ್ಥಿನಿ ಕಾಲಿನ ಮೇಲೆ ಹರಿದ ಬಸ್ ಟೈರ್: ಗಂಭೀರ ಗಾಯ

■ವಿಜಯಸಾಕ್ಷಿ ಸುದ್ದಿ, ತುಮಕೂರು

ಬಸ್ ಹತ್ತಲು ಯತ್ನಿಸಿದ ವೇಳೆ ವಿದ್ಯಾರ್ಥಿನಿಯ ಕಾಲಿನ ಮೇಲೆ ಬಸ್ ಟೈರ್ ಹರಿದು ಗಂಭೀರ ಗಾಯಗೊಂಡಿರುವ ಘಟನೆ ಬಸ್ ನಿಲ್ದಾಣದಲ್ಲಿ ನಡೆದಿದೆ. ಹರ್ಷಿತ (17) ಗಾಯಗೊಂಡ ವಿದ್ಯಾರ್ಥಿನಿಯಾಗಿದ್ದು, ಪ್ಯಾರಾಮೆಡಿಕಲ್ ಅಭ್ಯಾಸ ಮಾಡುತ್ತಿದ್ದಾಳೆ. ತುಮಕೂರಿನಿಂದ ಮಧುಗಿರಿಗೆ ಹೊರಟಿದ್ದ ಬಸ್‌ನಲ್ಲಿ ಪ್ರಯಾಣಿಕರ ಸಂಖ್ಯೆ ಹೆಚ್ಚಿದ್ದರಿಂದ ನೂಕಾಟ–ತಳ್ಳಾಟ ಉಂಟಾಗಿ ಈ ಅವಘಡ ಸಂಭವಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka